ಸಂಪುಟ : 10 ಸಂಚಿಕೆ: 61 ಪುಟ : 4+2 ಬೆಲೆ: 3.00 ಶನಿವಾರ ಎಪ್ರಿಲ್ 5 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 61 Pages : 4+2 Price : 3.00 Saturday April 5 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕಸಾಪ ದತ್ತಿ ಉಪನ್ಯಾಸ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಎಪ್ರಿಲ್ 5ರ ಬೆಳಿಗ್ಗೆ 11 ಗಂಟೆಗೆ ಪಿ.ಪಿ.ಜಿ. ಶಿಕ್ಷಣ ಮಹಾವಿದ್ಯಾಲಯದಲ್ಲಿ ಚನ್ನವೀರಶಾಸ್ತ್ರಿ ಹಿಡ್ಕಿಮಠ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಸಂಗೀತ ಕ್ಷೇತ್ರಕ್ಕೆ ವೀರೇಶ್ವರ ಪುಣ್ಯಾಶ್ರಮದ ಕೊಡುಗೆ ವಿಷಯವಾಗಿ ಕಲಾವಿಕಾಸ ಪರಿಷತ್ತಿನ ಅಧ್ಯಕ್ಷ ಚನ್ನವೀರಶಾಸ್ತ್ರೀ ಹಿರೇಮಠ (ಕಡಣಿ) ಉಪನ್ಯಾಸ ನೀಡುವರು. ಚನ್ನವೀರಶಾಸ್ತ್ರಿಗಳ ಸಂಸ್ಮರಣೆಯನ್ನು ಕಾರ್ಯದರ್ಶಿ ದತ್ತಪ್ರಸನ್ನ ಪಾಟೀಲ ಮಾಡುವರು. ದತ್ತಿ ದಾನಿಗಳಾದ ಪಂಚಾಕ್ಷರಯ್ಯ ಹಿರೇಮಠ ಹಾಗೂ ಪಿ.ಪಿ.ಜಿ. ಶಿಕ್ಷಣ ಮಹಾವಿದ್ಯಾಲದ ಪ್ರಾಚಾರ್ಯರಾದ ವೀರೇಶ ಹಿತ್ತಲಮನಿ ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಪರಿಷತ್ತಿನ ಸದಸ್ಯರು ಪಾಲ್ಗೊಳ್ಳಬೇಕೆಂದು ಕಾರ್ಯದರ್ಶಿಗಳಾದ ಕಿಶೋರಬಾಬು ನಾಗರಕಟ್ಟಿ, ಡಿ.ಎಸ್. ಬಾಪುರಿ, ದತ್ತಪ್ರಸನ್ನ ಪಾಟೀಲ, ಶ್ರೀಕಾಂತ ಬಡ್ಡೂರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಎಪ್ರಿಲ್:05 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 31, 32 – ದಾಸರಓಣಿ, ಸಿಕ್ಕಲಿಗಾರ ಓಣಿ, ಭಜಂತ್ರಿ ಓಣಿ, ಏಳು ಮಕ್ಕಳ ತಾಯಿ ಗುಡಿ, ದುರಗಮ್ಮನ ಗುಡಿ, ತ್ರಿಕೋಟೇಶ್ವರ ರಸ್ತೆ, ರಂಗನವಾಡ, ಹೆಚ್ ಡಿ ಎಫ್ ಸಿ ಬ್ಯಾಂಕ್, ಜೋಡ ಮಾರುತಿ ಗುಡಿ, ಹಳೆ ಕಚೇರಿ, ಝುಂಡಾ ಕಟ್ಟಿ, ಗುಜ್ಜರಬಸ್ತಿ, ಕಿಲ್ಲಾ, ಸುಣಗಾರ ಓಣಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 5 – ಹಳ್ಳಿಕೇರಿ ಪ್ಲಾಟ್, ಗಣೇಶ ನಗರ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 20, 21, 23 – ಗಣಪತಿ ಗುಡಿ, ಜಂತ್ಲಿಯವರ ಓಣಿ, ಕುಂಬಾರ ಓಣಿ, ದ್ಯಾಮವ್ವನ ಕಟ್ಟಿ, ಪಡಗದ 2 ಭಾಗಗಳು, ಸಿಟಿ ಹಾಲ್ 2 ಭಾಗಗಳು, ಹನುಮಾನ ಗರಡಿ, ವಿಭೂತಿ ಓಣಿ, ದ್ರೌಪದಿ ಬಾಯಿ, ಕೆರಕಲಮಟ್ಟಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 28 – ಅಪಾರ್ಟ್ಮೆಂಟ್, ದೇವಗಿರಿ ಸರ್ ಲೈನ್, ಎಸ್ ಎಸ್ ಪಾಟೀಲರ ಲೈನ್, ಕಾಗದಗಾರ ಲೈನ್, ಪಲ್ಲೇದವರ ಲೈನ್, ಅಬ್ಬಿಗೇರಿ ಲೈನ್, ಗವಾಯಿಗಳ ಆಶ್ರಮ, ಸೊಲ್ಲಾಪಟ್ಟಿ ಲೈನ್, ಕೃಷ್ಣ ಟ್ಯೂಷನ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 22 – ದೊಡ್ಡಮಸೂತಿ ಪೂರ್ತಿ ಭಾಗಗಳು. ವಾರ್ಡ್ ನಂ. 29 – ಮಸೂತಿ ಮೇಲಿನ ಭಾಗಗಳು ಮತ್ತು ಕೆಳಗಿನ ಭಾಗಗಳು. ವಾರ್ಡ್ ನಂ 35 – ಆದರ್ಶನಗರ, ಸಣ್ಣ ಸಾಯಿನಾಥ ಗುಡಿ, 9 ನಂಬರ ಶಾಲೆ.

**ಪ್ರಕಟಣೆ:** ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪತ್ರಿಕಾಗೋಷ್ಠಿಯಲ್ಲಿ ಹಿಂದೂ ವೀರಶೈವ ಯುವ ವೇದಿಕೆಯ ರಾಜ್ಯ ಸಂಚಾಲಕ ರಾಜು ಖಾನಪ್ಪನವರ ಆಕ್ರೋಶ

# ತೋಂಟದ ಶ್ರೀಗಳ ನಡೆ ಹಾಸ್ಯಾಸ್ಪದ



■ ವಿಜಯಸಾಕ್ಷಿ ಸುದ್ದಿ, ಗದಗ

ಜಗದ್ಗುರು ತೋಂಟದರ್ಯ ಮಠದ ಪೀಠಾಧಿಪತಿಗಳಾದ ಡಾ. ಸಿದ್ಧರಾಮ ಸ್ವಾಮೀಜಿಗಳು ಎಪ್ರಿಲ್ 6ರಂದು ವ್ಯಸನ ಮುಕ್ತ ಸಮಾಜಕ್ಕಾಗಿ ಪಾದಯಾತ್ರೆ ಮಾಡುತ್ತಿದ್ದಾರೆ. ಆದರೆ, ತಮ್ಮದೇ ಮಠದ ಆಸ್ತಿಯಲ್ಲಿ ಬಾರ್ ಆಂಡ್ ರೆಸ್ಟೊರೆಂಟ್ ನಡೆಸಲು ಅವಕಾಶ ಮಾಡಿಕೊಟ್ಟಿದ್ದಾರೆ. ಇತ್ತ ವ್ಯಸನ ಮುಕ್ತ ಸಮಾಜಕ್ಕಾಗಿ ಪಾದಯಾತ್ರೆ ಮಾಡುತ್ತಿರುವುದು ಹಾಸ್ಯಾಸ್ಪದವಾಗಿದೆ. ಈ ಪಾದಯಾತ್ರೆಯನ್ನು ನಾವು ಖಂಡಿಸುತ್ತೇವೆ ಎಂದು ಹಿಂದೂ ವೀರಶೈವ ಯುವ ವೇದಿಕೆಯ ರಾಜ್ಯ ಸಂಚಾಲಕ ರಾಜು ಖಾನಪ್ಪನವರ ಹೇಳಿದರು.

ಇಲ್ಲಿನ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಲಿಂ. ಸಿದ್ದಲಿಂಗೇಶ್ವರ ಸ್ವಾಮೀಜಿಗಳು ಹೋಟೆಲ್ ಉದ್ಘಾಟನೆಗೆ ಹೋಗಲು ನಿರಾಕರಿಸಿ, ಅನ್ನ ಮಾರುವುದನ್ನು ನಾನು ವಿರೋಧಿಸುತ್ತೇನೆ ಎಂದು ಹೇಳಿದ್ದರು. ಆದರೆ, ಕೆಲವು ದಿನಗಳ ನಂತರ ಬಾರ್ ಆಂಡ್ ರೆಸ್ಟೋರೆಂಟ್ ಉದ್ಘಾಟನೆಗೆ ಹೋಗಿದ್ದರು. ಇದು ಅಂದಿನ ಸ್ವಾಮೀಜಿಗಳ ದ್ವಿಮುಖ ನೀತಿಯನ್ನು ಎತ್ತಿ ತೋರಿಸುತ್ತದೆ. ಜಾತ್ಯಾತೀತ ಮಠ ಎಂದು ಹೇಳಿಕೊಂಡು ಹಿಂದೂ ಸಂಪ್ರದಾಯವನ್ನು ಸ್ವಾಮೀಜಿಗಳು ಹಾಳು ಮಾಡುತ್ತಿದ್ದರು ಎಂದು ಲಿಂಗೈಕ್ಯ ಶ್ರೀಗಳ ವಿರುದ್ಧವೂ ತಮ್ಮ ಆಕ್ರೋಶವನ್ನು ಹೊರಹಾಕಿದರು.

ತೋಂಟದಾರ್ಯ ಮಠದಿಂದ ಈ ಹಿಂದೆ 'ಮಠ್ ಬಚಾವೊ, ಬಾರ್ ಹಠಾವೋ' ಎನ್ನುವ ಘೋಷಣೆಯೊಂದಿಗೆ ಹೋರಾಟವನ್ನು ಆಯೋಜನೆ ಮಾಡಲಾಗಿತ್ತು. ಆದರೆ, ಶ್ರೀಮಠ ಮಾಲೀಕತ್ವದ ಜಾಗದಲ್ಲಿ ಬಾರ್ ತೆರೆಯಲು ಲೀಸ್‌ಗೆ ನೀಡಿದ್ದಾರೆ. ಅಂದರೆ, ಹಣ ಬರುವ ದಾರಿಯಿದ್ದರೆ ಯಾರಿಗಾದರೂ ಲೀಸ್ ಅಥವಾ ಬಾಡಿಗೆಗೆ ನೀಡುತ್ತಾರೆ. ಇತ್ತ ಬೀದಿಗೆ ಬಂದು ವ್ಯಸನ ಮುಕ್ತ ಸಮಾಜಕ್ಕಾಗಿ ಪಾದಯಾತ್ರೆ ಎಂದು ಹೇಳುತ್ತಾರೆ. ಅಷ್ಟೇ ಅಲ್ಲದೆ, ತೋಂಟದಾರ್ಯ ಮಠದ ಜಾತ್ರೆ ವ್ಯಾಪಾರ ಕೇಂದ್ರವಾಗಿದೆ. ಜಾತ್ರೆಯಲ್ಲಿ ಹಿಂದೂಗಳಿಗಿಂತ ಅನ್ಯಧರ್ಮೀಯ ವ್ಯಾಪಾರಸ್ಥರೇ ಹೆಚ್ಚು ಇರುತ್ತಾರೆ. ಒಂದು ತಿಂಗಳಿಗೂ ಹೆಚ್ಚು ಕಾಲ ಇಲ್ಲಿ ದೇಶದ ನಾನಾ ರಾಜ್ಯಗಳಿಂದ ಬಂದು ವ್ಯಾಪಾರ ಮಾಡುತ್ತಾರೆ. ಇದರಿಂದ ಸ್ಥಳೀಯ ವ್ಯಾಪಾರಸ್ಥರು ಸಂಕಷ್ಟ ಎದುರಿಸುತ್ತಾರೆ ಎಂದು ಕಿಡಿ ಕಾರಿದರು.

> ಜಗದ್ಗುರು ತೋಂಟದಾರ್ಯ ಮಠದ ಮುಖ್ಯ ದ್ವಾರ ಬಾಗಿಲ ಮೇಲೆ ಆಕರ್ಷಕ ನಂದಿ ಇದೆ. ಇದು ನಮ್ಮ ಪರಂಪರೆಯೂ ಹೌದು. ಆದರೆ, ನಾವು ಆರಾಧಿಸುವ ನಂದಿಯನ್ನು ಕೊಂದು ತಿನ್ನುವವರನ್ನು ತೋಂಟದಾರ್ಯ ಮಠದ ಶ್ರೀಗಳು ಪಕ್ಕದಲ್ಲಿ ಕೂರಿಸಿಕೊಳ್ಳುತ್ತಾರೆ. ಇದು ನಮ್ಮ ಸಂಸ್ಕೃತಿಗೆ ವಿರುದ್ಧವಾಗಿದೆ. ನಂದಿಯನ್ನು ಕೆಳಗಿಳಿಸಲಿ ಅಥವಾ ನಂದಿ ತಿನ್ನುವವರಿಂದ ಶ್ರೀಗಳು ದೂರವಿರಲಿ.
>
> **– ರಾಜು ಖಾನಪ್ಪನವರ.**
> **ರಾಜ್ಯ ಸಂಚಾಲಕ,**
> **ಹಿಂದೂ ವೀರಶೈವ ಯುವ ವೇದಿಕೆ.**

ಪತ್ರಿಕಾಗೋಷ್ಠಿಯಲ್ಲಿ ವಿಶ್ವನಾಥ ಶೀರಿ, ಸತೀಶ್ ಕುಂಬಾರ, ಶಿವಯೋಗಿ ಹಿರೇಮಠ, ವೆಂಕಟೇಶ ದೊಡ್ಡಮನಿ, ಕುಮಾರ ನಡಗೇರಿ, ಕಿರಣ್ ಹಿರೇಮಠ, ಸಂತೋಷ ಹುಯಿಲಗೋಳ, ಪುಟ್ಟರಾಜ ಮೂರುಶಿಳ್ಳಿನ ಉಪಸ್ಥಿತರಿದ್ದರು.

### ರವಿ ಎಲ್.ಗುಂಜೀಕರ್ ಅಭಿಮಾನಿ ಬಳಗ ಉದ್ಘಾಟನೆ । 60ನೇ ವರ್ಷದ ಜನ್ಮದಿನ ಆಚರಣೆ

# ಗುಂಜೀಕರರು ಸರಕಾರಿ ನೌಕರರ ಬೆನ್ನೆಲುಬು



■ ವಿಜಯಸಾಕ್ಷಿ ಸುದ್ದಿ, ಗದಗ

ಜೀವನ ಎಂದರೆ ಬರೀ ಬದುಕುವದು ಅಲ್ಲ, ಬದುಕಿನಲ್ಲಿ ಹೇಗೆ ಸಾಮಾಜಿಕ ಸೇವೆ ಮಾಡಬೇಕು ಎಂದು ತೋರಿಸಿಕೊಟ್ಟವರು ರವಿ ಗುಂಜೀಕರರು ಎಂದು ಓಂಕಾರೇಶ್ವರ ಮಠದ ಪೂಜ್ಯಶ್ರೀ ಫಕ್ಕೀರೇಶ್ವರ ಶಿವಾಚಾರ್ಯರು ಹೇಳಿದರು.

ಅವರು ನಗರದ ಸರ್ಕಾರಿ ನೌಕರರ ಭವನದಲ್ಲಿ ಶುಕ್ರವಾರ ಜರುಗಿದ ರವಿ ಎಲ್.ಗುಂಜೀಕರ್ ಅಭಿಮಾನಿ ಬಳಗದ ಉದ್ಘಾಟನೆ ಹಾಗೂ ಅವರ 60ನೇ ವರ್ಷದ ಹುಟ್ಟುಹಬ್ಬ ಆಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ರವಿ ಗುಂಜೀಕರರ ಆಡಳಿತದ ಜವಾಬ್ದಾರಿ, ಸಾಮಾಜಿಕ ಸೇವೆ ಮೆಚ್ಚುವಂತಿದೆ. ನಿವೃತ್ತಿಯ ನಂತರವೂ ಪ್ರವೃತ್ತಿಯಲ್ಲಿ ಅವರ ಸೇವೆ ಮುಂದುವರೆಯಬೇಕೆಂದು ಅವರ ಅಭಿಮಾನಿ ಬಳಗವು ಸಂಘವನ್ನು ಸ್ಥಾಪಿಸಿರುವುದು ಶ್ಲಾಘನೀಯ. ಇದಕ್ಕೆಲ್ಲ ಪ್ರೇರಣೆ ಅವರ ತಂದೆ-ತಾಯಿಯ ಆಶೀರ್ವಾದ. ರವಿ ಗುಂಜೀಕರರ ಅಭಿಮಾನಿ ಬಳಗದಿಂದ ಸಮಾಜಕ್ಕೆ ಉತ್ತಮ ಕೊಡುಗೆಗಳು ನಿರಂತರವಾಗಿ ಸಿಗಲಿ ಎಂದು ಹಾರೈಸಿದರು.

ಜಿ.ಪಂ ಉಪ ಕಾರ್ಯದರ್ಶಿ ಚಂದ್ರಶೇಖರ ಮುಂಡರಗಿ ಮಾತನಾಡಿ, ಅಭಿಮಾನಿ ಬಳಗವು ಕೇವಲ ಸಿನಿಮಾ ನಟರಿಗೆ ಮೀಸಲಾಗಿತ್ತು. ಆದರೆ, ರವಿ ಗುಂಜೀಕರರ ಅಭಿಮಾನಿ ಬಳಗವು ಸದೃಢ ಸಮಾಜ ನಿರ್ಮಾಣ ಮಾಡಲು ಹಲವಾರು ಧ್ಯೇಯೋದ್ದೇಶಗಳೊಂದಿಗೆ ಸ್ಥಾಪನೆಗೊಂಡಿರುವುದು ಶ್ಲಾಘನೀಯ ಎಂದರು.

ಡಾ. ಎಸ್.ಆರ್. ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿ, ರವಿ ಗುಂಜೀಕರರ ಅಭಿಮಾನಿ ಬಳಗ ಬಹುದೊಡ್ಡ ದೂರದೃಷ್ಟಿ ಹೊಂದಿದೆ. ವೃತ್ತಿಯಲ್ಲಿ ಸಾಕಷ್ಟು ಸಾಧನೆ ಮಾಡಿರುವ ರವಿ ಗುಂಜೀಕರರು ನಿವೃತ್ತಿಯ ನಂತರ ಸಾಮಾಜಿಕ ಸೇವೆ ಮಾಡಬೇಕು ಎಂಬ ಅಭಿಲಾಷೆಗಳೊಂದಿಗೆ ಈ ಅಭಿಮಾನಿ ಬಳಗವನ್ನು ಸ್ಥಾಪಿಸಲಾಗಿದ್ದು, ಈ ಸಂಘದಿಂದ ಆರೋಗ್ಯ ಸೇವೆ, ಶಿಕ್ಷಣಕ್ಕೆ ಆದ್ಯತೆ, ವಿದ್ಯಾರ್ಥಿನಿಯರಿಗೆ ಉಚಿತ ವಸತಿ ನಿಲಯ, ಸಮುದಾಯ ಭವನ, ಸಾಹಿತ್ಯ, ಸಂಸ್ಕೃತಿ, ಕಲೆ ಉಳಿಸುವುದು, ಗ್ರಾಮೀಣ ಜನರ ಅಭಿವೃದ್ಧಿಗೆ ಯೋಜನೆಯನ್ನು ರೂಪಿಸುವುದು ಇತ್ಯಾದಿ ಉತ್ತಮ ಸಮಾಜ ನಿರ್ಮಾಣ ಮಾಡಬೇಕು ಎಂಬ ಉದ್ದೇಶ ಹೊಂದಿದೆ ಎಂದರು.

> ಗಣ್ಯ ಉದ್ಯಮಿ ರಾಜು ಗುಡಿಮನಿ ಮಾತನಾಡಿ, ಡಾ. ರವಿ ಗುಂಜೀಕರರು ಈಗಾಗಲೇ ಸರಕಾರಿ ಸೇವೆಯಲ್ಲಿ ಇದ್ದು, ದಕ್ಷ ಆಡಳಿತದ ಮೂಲಕ ಜನರ ಮೆಚ್ಚುಗೆಯನ್ನು ಗಳಿಸಿದ್ದಾರೆ. ಮುಂಬರುವ ದಿನಗಳಲ್ಲಿ ಸಮಾಜ ಸೇವೆಯ ಮೂಲಕ ಅವರು ಇನ್ನಷ್ಟು ಕೊಡುಗೆ ನೀಡಬೇಕು. ನಿವೃತ್ತಿ ನಂತರ ಸಾಕಷ್ಟು ಜನರು ಪಿಂಚಣಿ, ಮಕ್ಕಳ ಭವಿಷ್ಯದ ಬಗ್ಗೆ, ಕುಟುಂಬದವರಿಯೊಂದಿಗೆ ಕಾಲ ಕಳೆಯಲು ಇಷ್ಟಪಡುತ್ತಾರೆ. ಆದರೆ, ರವಿ ಗುಂಜೀಕರರು ನಿವೃತ್ತಿ ನಂತರ ಸಮಾಜಕ್ಕೆ ಮತ್ತಷ್ಟು ಕೊಡುಗೆ ಕೊಡಲು ತುದಿಗಾಲ ಮೇಲೆ ನಿಂತಿದ್ದಾರೆ. ಅವರ ಲವಲವಿಕೆ, ಉತ್ಸಾಹ ಈ ಸಮಾಜಕ್ಕೆ ಪ್ರೇರಣೆಯಾಗಲಿದೆ ಎಂದು ಹೇಳಿದರು.

ನೀಲಗುಂದದ ಮಂಜುನಾಥ ಸ್ವಾಮಿಗಳು ಸಮ್ಮುಖವಹಿಸಿದ್ದರು. ಅರುಣಕುಮಾರ ಚವ್ಹಾಣ, ವಿಜಯಕುಮಾರ ಗಡ್ಡಿ, ಆರ್.ಎಂ. ನಿಂಬನಾಯ್ಕರ, ಮಲ್ಲಿಕಾರ್ಜುನ ಹಿರೇಮಠ, ಹುಚ್ಚಪ್ಪ ಸಂದಕದ, ಬಸವರಾಜ ಬಳ್ಳಾರಿ, ಭಾಷಾಸಾಬ್ ಮಲ್ಲಸಮುದ್ರ, ವಿಜಯ್ ಗುಂಜೀಕರ, ಈರಮ್ಮ ತಾಳಿಕೋಟಿ ಮುಂತಾದವರು ಉಪಸ್ಥಿತರಿದ್ದರು.



ಇತ್ತೀಚೆಗೆ ಬೆಂಗಳೂರಿನಲ್ಲಿ ರಾಜ್ಯ ಸರಕಾರದ ವತಿಯಿಂದ 2022ನೇ ಸಾಲಿನ ಮುಖ್ಯಮಂತ್ರಿ ಪೊಲೀಸ್ ಪದಕವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಸ್ವೀಕರಿಸಿದ ಗದಗ ಜಿಲ್ಲಾ ಪೊಲೀಸ್ ಇಲಾಖೆಯ ಸೈಬರ್ ಕ್ರೈಂ ವಿಭಾಗದ ಹಿರಿಯ ಪೊಲೀಸ್ ಪೇದೆ ಆನಂದಸಿಂಗ್ ಪಿ ದೊಡ್ಡಮನಿ ಅವರನ್ನು ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮುಖ್ಯಮಂತ್ರಿ ಪದಕವನ್ನು ತೊಡಿಸುವ ಮೂಲಕ ಗೌರವಿಸಿದರು. ಈ ಸಂದರ್ಭಧಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂದಕದ ಇದ್ದರು.

### ಮಹಿಳಾ-ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಸಮಿತಿಗಳ ಸಭೆಯಲ್ಲಿ ಡಿಸಿ ಸಿ.ಎನ್. ಶ್ರೀಧರ್

# ವಿವಿಧ ಯೋಜನೆಗಳ ಸೌಲಭ್ಯ ಒದಗಿಸಲು ಕ್ರಮ ವಹಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಸರಕಾರದಿಂದ ಮಹಿಳಾ ಮತ್ತು ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಇರುವ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ಒದಗಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಜಿಲ್ಲಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲ್ಯ ವಿವಾಹ ತಡೆಗಟ್ಟಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯೊಂದಿಗೆ ವಿವಿಧ ಇಲಾಖೆಯ ಸಹಭಾಗಿತ್ವವೂ ಅವಶ್ಯಕವಾಗಿದೆ. ಬಾಲ್ಯ ವಿವಾಹ ನಿಷೇಧ ಹಾಗೂ ಪೋಕ್ಸೋ ಕಾಯ್ದೆಯ ಕುರಿತು ಇನ್ನೂ ಹೆಚ್ಚಿನ ಅರಿವು ಮೂಡಿಸುವ ಕೆಲಸವಾಗಬೇಕು. ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಮೂಲಭೂತ ಸೌಲಭ್ಯಗಳು ಇರುವಂತೆ ನೋಡಿಕೊಳ್ಳಬೇಕು. ಮಹಿಳಾ ಮತ್ತು ಮಕ್ಕಳ ದೌರ್ಜನ್ಯ, ಮಹಿಳೆಯರ ಮತ್ತು ಮಕ್ಕಳ ಸಾಗಾಟ, ಕೌಟುಂಬಿಕ ದೌರ್ಜನ್ಯ ಸೇರಿದಂತೆ ವಿವಿಧ ಪ್ರಕರಣಗಳ ಶೀಘ್ರ ಇತ್ಯರ್ಥ-ಕ್ಕೆ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಮಾತನಾಡಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯವರು ಕಾನೂನು ಇಲಾಖೆಯ ಸಹಕಾರದೊಂದಿಗೆ ಮಹಿಳೆಯರಿಗೆ ಮತ್ತು ಮಕ್ಕಳಿಗಾಗಿ ಇರುವ ವಿವಿಧ ಯೋಜನೆಗಳ ಹಾಗೂ ಬಾಲ್ಯ ವಿವಾಹ ನಿಷೇಧ, ಪೋಕ್ಸೋ ಕಾಯ್ದೆಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳಬೇಕೆಂದು ನಿರ್ದೇಶನ ನೀಡಿದರು.

> ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಪದ್ಮಾವತಿ ಜಿ ಮಾತನಾಡಿ, ಸಖಿ ಒನ್ ಸ್ಟಾಪ್ ಸೆಂಟರ್, ಮಿಷನ್ ಶಕ್ತಿ ಯೋಜನೆಯ ಮಹಿಳಾ ಸಬಲೀಕರಣ ಘಟಕ ಹಾಗೂ ಸಾಂತ್ವನ ಕೇಂದ್ರಗಳ ಮೂಲಕ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯಡಿ ಅತೀ ಕಡಿಮೆ ಲಿಂಗಾನುಪಾತ ಇರುವ ತಾಲೂಕು ಹಾಗೂ ಗ್ರಾ.ಪಂ ಮಟ್ಟದಲ್ಲಿ ಬೀದಿ ನಾಟಕಗಳ ಮುಖಾಂತರ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಜಿಲ್ಲೆಯ ಅಂಗನವಾಡಿ ಕೇಂದ್ರಗಳಲ್ಲಿ ಮೂಲಭೂತ ಸೌಲಭ್ಯಗಳೊಂದಿಗೆ ಶುದ್ಧ ಕುಡಿಯುವ ನೀರು ಒದಗಿಸಲು ಕ್ರಮ ವಹಿಸಬೇಕೆಂದು ಸೂಚಿಸಿದರು.

ಸಭೆಯಲ್ಲಿ ಸ್ವಾಧಾರ ಗೃಹ ಯೋಜನೆ, ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆ, ಪಾಲನಾ ಯೋಜನೆ, ಸಖಿ ನಿವಾಸ ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯ, ಮಹಿಳಾ ಮತ್ತು ಮಕ್ಕಳ ದೌರ್ಜನ್ಯ ತಡೆ ಹಾಗೂ ಮಹಿಳೆಯರ ಮತ್ತು ಮಕ್ಕಳ ಸಾಗಾಟ ತಡೆ ಯೋಜನೆ, ಸ್ವೀಕಾರ ಕೇಂದ್ರ, ವಿಧವಾ ಕೋಶ ಯೋಜನೆ, ಸಾಂತ್ವನ ಯೋಜನೆ, ಜಿಲ್ಲಾ ಮತ್ತು ತಾಲೂಕು ಶಿಶು ಪಾಲನಾ ಯೋಜನೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ.ಮೀನಾಕ್ಷಿ, ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ರಫೀಕಾ ಹಳ್ಳೂರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ರಾಧಾ ಮಣ್ಣೂರ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು, ಸಂಘ-ಸಂಸ್ಥೆಯವರು ಹಾಜರಿದ್ದರು.

# ರೈತ ಬಾಂಧವರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನ ಹಂಗಾಮಿಗೆ ಭೂಮಿ ಸಿದ್ಧಪಡಿಸಿ ಹದಗೊಳಿಸಲು ಜಿಲ್ಲೆಯ ಎಲ್ಲಾ ರೈತರು ಮಾಗಿ ಉಳುಮೆ ಕೈಗೊಳ್ಳಬೇಕು. ಮಣ್ಣಿನ ಸವಕಳಿಯನ್ನು ತಪ್ಪಿಸಲು ಹಾಗೂ ನೀರಿನ ಹರಿಯುವಿಕೆಯನ್ನು ಕಡಿಮೆ ಮಾಡಲು ಇಳಿಜಾರಿಗೆ ಅಡ್ಡಲಾಗಿ ಬದು ನಿರ್ಮಾಣವನ್ನು ಎಂ.ಜಿ.ಎನ್.ಆರ್.ಇ.ಜಿ.ಎ. ಯೋಜನೆಯಡಿ ಕೈಗೊಳ್ಳುವುದು. ಹಿಂಗಾರು ಬೆಳೆ ಮಾತ್ರ ಬೆಳೆಯಬೇಕೆಂದಿರುವ ಜಮೀನಿನಲ್ಲಿ ಇಳುಕಲಿಗೆ ಅಡ್ಡವಾಗಿ ರೆಂಟೆ ಹೊಡೆದು ಇಲ್ಲವೇ ಚೌಕು ಮಡಿಗಳನ್ನು ಮಾಡುವುದರಿಂದ ಮಣ್ಣಿನಲ್ಲಿ ನೀರಿನ/ತೇವಾಂಶದ ಸಂಗ್ರಹ ಹೆಚ್ಚಾಗಿ, ಹಿಂಗಾರು ಬೆಳೆಗಳ ಉತ್ತಮ ಇಳುವರಿ ಪಡೆಯಲು ಸಹಕಾರಿಯಾಗುವುದು.

ಹಿಂದಿನ ಹಂಗಾಮಿನ ಬೆಳೆಗಳ ಉಳಿಕೆಗಳನ್ನು ಸುಡಬಾರದು. ಅವುಗಳನ್ನು ಕಾಂಪೋಸ್ಟ್ ಮಾಡಲು ಅಥವಾ ಎರೆಹುಳು ಗೊಬ್ಬರ ತಯಾರಿಸಲು ಉಪಯೋಗಿಸಬೇಕು. ಎರೆಹುಳು ತೊಟ್ಟಿಯಲ್ಲಿ ಕನಿಷ್ಠ ಶೇ.75 ತೇವಾಂಶ ಇರುವ ಹಾಗೆ ನೋಡಿಕೊಳ್ಳಬೇಕು. ದನ ಕರುಗಳಿಗೆ ಬಿಸಿಲಿನ ತಾಪದಿಂದ ರಕ್ಷಿಸಲು ಸಾಕಷ್ಟು ನೆರಳು ಹಾಗೂ ಕುಡಿಯಲು ನೀರು ಇರುವ ಹಾಗೆ ನೋಡಿಕೊಳ್ಳಬೇಕು.

ಜಿಲ್ಲೆಯ ಗದಗ ಹಾಗೂ ಮುಂಡರಗಿ ತಾಲೂಕುಗಳ ಕೆಲವೆಡೆ ಬೇಸಿಗೆಯಲ್ಲಿ ಸೂರ್ಯಕಾಂತಿ ಬಿತ್ತನೆ ಕೈಗೊಳ್ಳುವ ವಾಡಿಕೆಯಿದೆ. ಪ್ರಸ್ತುತ ಉಷ್ಣಾಂಶವು ಅಧಿಕ ಇರುವುದರಿಂದ ಹಾಗೂ ನೀರಿನ ಕೊರತೆ ಇರುವುದರಿಂದ ಸೂರ್ಯಕಾಂತಿ ಬೆಳವಣಿಗೆ ಕುಂಠಿತವಾಗುತ್ತದೆ, ಮತ್ತು ಕೀಟ ಮತ್ತು ರೋಗ ಬಾಧೆ ಹೆಚ್ಚಾಗುವ ಸಾಧ್ಯತೆಯಿದೆ. ಸೂರ್ಯಕಾಂತಿ ಬಿತ್ತನೆ ಮಾಡಬಾರದೆಂದು ರೈತರಲ್ಲಿ ಗದಗ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶ್ರೀ ಜಗದ್ಗುರು ರೇವಣಸಿದ್ಧೇಶ್ವರರ ಜಾತ್ರಾ ಮಹೋತ್ಸವ । ಧರ್ಮ ಜಾಗೃತಿ ಸಮಾರಂಭದಲ್ಲಿ ರಂಭಾಪುರಿ ಶ್ರೀ

# ಅರಿವು–ಆಚರಣೆಯಿಂದ ಬಾಳು ಸಾರ್ಥಕ

■ವಿಜಯಸಾಕ್ಷಿ ಸುದ್ದಿ, ಕಾಳಗಿ

ಅರಿವುಳ್ಳ ಮಾನವ ಜನ್ಮದಲ್ಲಿ ಅರಿತು ಬಾಳಿದರೆ ಬಾಳು ಬಂಗಾರ. ಮರೆತು ಮಲಗಿದರೆ ಬಾಳು ಬಂಧನಕಾರಿ. ಮಹಾತ್ಮರ ಸಂದೇಶಗಳು ಎಲ್ಲರಿಗೂ ದಾರಿದೀಪ. ಅರಿವು ಮತ್ತು ಆಚರಣೆಯಿಂದ ಬಾಳು ಸಾರ್ಥಕಗೊಳ್ಳುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಹದನೂರು ಹಿರೇಮಠದ ನೂತನ ಕಟ್ಟಡದ ಉದ್ಘಾಟನೆ ಹಾಗೂ ಶ್ರೀ ಜಗದ್ಗುರು ರೇವಣಸಿದ್ಧೇಶ್ವರರ 10ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮಾನವನ ಉಸಿರಾಟಕ್ಕೆ ಗಾಳಿ ಎಷ್ಟು ಮುಖ್ಯವೋ, ಜೀವನದ ಉಜ್ವಲ ಭವಿಷ್ಯಕ್ಕೆ ಆಚಾರ್ಯರ ಮತ್ತು ಸತ್ಪುರುಷರ ಮಾರ್ಗದರ್ಶನವೂ ಅಷ್ಟೇ ಅವಶ್ಯಕತೆಯಿದೆ. ಧರ್ಮದಿಂದ ಮನುಷ್ಯ ವಿಮುಖನಾದರೆ ಅವನತಿ ಶತಸಿದ್ಧ. ಮೂಲ ನಂಬಿಕೆಗಳನ್ನು ಉಳಿಸಿ ಬೆಳೆಸಿಕೊಂಡು ಬರುವುದರಿಂದ ಬಾಳಿನಲ್ಲಿ ಶಾಂತಿ



ನೆಮ್ಮದಿ ಕಾಣಲು ಸಾಧ್ಯವಾಗುತ್ತದೆ. ಶ್ರೀ ಜಗದ್ಗುರು ರೇವಣಸಿದ್ಧೇಶ್ವರರು ಧಾರ್ಮಿಕ ಮತ್ತು ಸಾಮಾಜಿಕ ಚಿಂತನಗಳ ಗಂಗೋತ್ರಿಯಾಗಿದ್ದಾರೆ. ಮಹಾತ್ಮರು ತೋರಿದ ದಾರಿ ಕೊಟ್ಟ ಸಂದೇಶ ಎಲ್ಲರಿಗೂ ಆಶಾಕಿರಣ ಎಂದರು.

ಈ ಪವಿತ್ರ ಸಮಾರಂಭದಲ್ಲಿ ಮುಗಳನಾಗಾಂವ ಅಭಿನವ ಸಿದ್ಧಲಿಂಗ ಶ್ರೀಗಳು, ಕಡಕೋಳ ರುದ್ರಮುನಿ ಶ್ರೀಗಳು, ತೋನಸನಳ್ಳಿ ರೇವಣಸಿದ್ಧ ಚರಂತೇಶ್ವರ ಶ್ರೀಗಳು, ಅವರಾದ ಮರುಳಸಿದ್ಧ ಶ್ರೀಗಳು, ಸೊಂತಮರ ಹಾಗೂ ನರನಾಳ ಶಿವಕುಮಾರ ಶ್ರೀಗಳು, ಶ್ರೀನಿವಾಸ ಸರಡಗಿ ವೀರಭದ್ರಯ್ಯ ಶ್ರೀಗಳು, ಹದನೂರು ತಾಂಡಾದ ಶಾಂತದೇವಿ ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು. ಹದನೂರು ಹಿರೇಮಠದ ಧರ್ಮದರ್ಶಿ ವೀರಭದ್ರಯ್ಯ ಹಿರೇಮಠ ಡಾ. ಶಿವಶಂಕರ್ ಬಿರಾದಾರ್ ಉಪಸ್ಥಿತರಿದ್ದರು. ನಗನೂರ ಜಗದೀಶ್ ಶರಣರ ಸಂಗೀತಕ್ಕೆ ಸಿದ್ಧಯ್ಯಸ್ವಾಮಿ ಸಾಲಿ ತಬಲಾ ಸಾಥ ನೀಡಿದರು.

ಸಮಾರಂಭಕ್ಕೂ ಮುನ್ನ ಶ್ರೀ ರಂಭಾಪುರಿ ಜಗದ್ಗುರುಗಳವರ ಅಡ್ಡಪಲ್ಲಕ್ಕಿ ಮಹೋತ್ಸವ ಸಂಭ್ರಮದಿಂದ ಜರುಗಿತು. ನಂತರ ಶ್ರೀ ಹಿರೇಮಠದ ನೂತನ ಕಟ್ಟಡದ ಉದ್ಘಾಟನೆ ನಡೆಯಿತು. ಸಂಜೆ 6 ಗಂಟೆಗೆ ಶ್ರೀ ರೇವಣಸಿದ್ಧೇಶ್ವರ ರಥೋತ್ಸವ ಜರುಗಿತು. ಸಮಾರಂಭದ ನಂತರ ಅನ್ನ ದಾಸೋಹ ಜರುಗಿತು.

ನೇತೃತ್ವ ವಹಿಸಿದ್ದ ಶ್ರೀನಿವಾಸ ಸರಡಗಿಯ ಡಾ. ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಶುದ್ಧವಾದ ಬುದ್ಧಿ ಸಂಪತ್ತಿನ ಆಗರ. ತನಗಾಗಿ ಬಯಸುವುದು ಜೀವಗುಣ. ಎಲ್ಲರಿಗಾಗಿ ಬಯಸುವುದು ದೇವಗುಣ. ಅಧಿಕಾರದ ಅಂತಸ್ತು ಏರಿದಂತೆ ನೀತಿಯ ಅಂತಸ್ತು ಮೇಲೇರಬೇಕು. ಬದುಕಿ ಬಾಳುವ ಜನಾಂಗಕ್ಕೆ ವೀರಶೈವ ಧರ್ಮದ ಕೊಡುಗೆ ಅಪಾರವೆಂದರು.

# ನರೇಗಾ ಕಾಮಗಾರಿ ಕೂಲಿ ಕಾರ್ಮಿಕರಿಗೆ ವರದಾನ

■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನಲ್ಲಿ ಎಪ್ರಿಲ್ ಮೊದಲ ವಾರರಿಂದ ಉದ್ಯೋಗ ಖಾತ್ರಿ ಕೆಲಸ ಆರಂಭವಾಗಿದ್ದು, ನರೇಗಾ ಯೋಜನೆಯಡಿ ಅನೇಕ ಅಭಿವೃದ್ಧಿ ಕಾಮಗಾರಿ ಕೈಗೊಳ್ಳುವ ಅವಕಾಶವಿದೆ. ಗ್ರಾಮೀಣ ಪ್ರದೇಶಗಳ ಜನರಿಗೆ ಯೋಜನೆಯ ಸದುಪಯೋಗ ಮಾಡಿಕೊಡುವ ಕೆಲಸ ನಿಮ್ಮಿಂದ ಆಗಬೇಕು ಎಂದು ಕಾಯಕ ಬಂಧುಗಳ ಸಭೆಯಲ್ಲಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಹೇಳಿದರು.

ಪಟ್ಟಣದ ಕನ್ನಡ ಸಾಹಿತ್ಯ ಸಭಾ ಭವನದಲ್ಲಿ ಮಂಗಳವಾರ ನಡೆದ ಪಿಡಿಓ, ಕಾಯಕಬಂಧುಗಳ ಹಾಗೂ ನರೇಗಾ ಸಿಬ್ಬಂದಿಗೆ ಆಯೋಜಿಸಿದ ಒಂದು ದಿನದ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಬರಗಾಲದಲ್ಲಿ ಕೆಲಸ ಸಿಗುವುದಿಲ್ಲ ಎಂದು ಆತಂಕದಲ್ಲಿರುವ ಗ್ರಾಮೀಣ ಪ್ರದೇಶದ ಕೂಲಿಕಾರರಿಗೆ ನೆರವಾಗಲು




ಎಪ್ರಿಲ್ ಮೊದಲ ವಾರದಲ್ಲೇ ನರೇಗಾ ಯೋಜನೆಯಡಿಯಲ್ಲಿ ಸಮುದಾಯ ಕಾಮಗಾರಿಗಳನ್ನು ಆರಂಭಿಸಲಾಗುತ್ತಿದೆ. ವಾರ್ಷಿಕವಾಗಿ 100 ದಿನಗಳವರೆಗೆ ಗ್ರಾಮೀಣ ಪ್ರದೇಶದ ಕೂಲಿಕಾರರಿಗೆ ಕೆಲಸ ಸಿಗುವಂತಾಗಬೇಕು. ಈ ಮೂಲಕ ಗ್ರಾಮೀಣ ಪ್ರದೇಶದ ಮೂಲಭೂತ ಸಮಸ್ಯೆಗಳನ್ನು ನಿವಾರಿಸಲು ನರೇಗಾ ವರದಾನವಾಗಲಿದೆ ಎಂದರು.

ಬೇಸಿಗೆ ಅವಧಿಯ 60 ದಿನಗಳ ಕಾಲ ನರೇಗಾ ಯೋಜನೆಯಡಿ ಕೆಲಸ ಮಾಡಿದರೆ ಕೂಲಿಕಾರರಿಗೆ 22,200 ರೂಪಾಯಿ ಸಿಗುತ್ತದೆ. ಕೂಲಿಕಾರರು ನರೇಗಾ ಯೋಜನೆಯಿಂದಾಗಿ ಬರುವ ಈ ಹಣವನ್ನು ಮುಂಗಾರಿನ ಕೃಷಿ ಬಿತ್ತನೆಯ ಕಾರ್ಯಕ್ಕೆ ಸದುಪಯೋಗಪಡಿಸಿಕೊಳ್ಳಲು ನೆರವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಾಗಾರದಲ್ಲಿ ರೋಣ ತಾಲೂಕಿನ 22 ಗ್ರಾಮ ಪಂಚಾಯಿತಿಗಳ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಇಂಜಿನಿಯರ್‌ಗಳು, ಬಿಎಫ್‌ಟಿ, ಜಿಕೆಎಂ, ಡಿಇಓ, ಸೇರಿದಂತೆ ನರೇಗಾ ಸಿಬ್ಬಂದಿ ವರ್ಗದವರು ಹಾಜರಿದ್ದರು.

### 'ಕರಾಸ್ತ್ರ' ಚಿತ್ರದ ಟ್ರೈಲರ್, ವಿಡಿಯೊ ಸಾಂಗ್ ಬಿಡುಗಡೆ ಇಂದು

# ಸಿನಿಮಾ ವೀಕ್ಷಿಸಿ, ಪ್ರೋತ್ಸಾಹಿಸಿ

■ವಿಜಯಸಾಕ್ಷಿ ಸುದ್ದಿ, 000

ವಿಜಯಸಾಕ್ಷಿ ಸುದ್ದಿ, ಗದಗ

ಕರಾಟೆಯನ್ನು ಸಿನಿಮಾದಲ್ಲಿ ಪ್ರಯೋಗ ಮಾಡಬೇಕು ಎನ್ನುವ ಮಹಾದಾಸೆಯನ್ನು ಹೊಂದಿದ್ದೆ. ಅದರಂತೆ ಎರಡು ಸಿನಿಮಾದಲ್ಲಿ ನೈಜ ಕರಾಟೆ ಪಟುಗಳಿಗೆ ಅವಕಾಶ ಮಾಡಿಕೊಡಲಾಯಿತು. ಅದರಲ್ಲಿ ಒಂದು ಸಿನಿಮಾ ಪ್ರೇಕ್ಷಕರಿಗೆ ಇಷ್ಟವಾದರೆ, ಇನ್ನೊಂದು ಸಿನಿಮಾಗೆ ಹೇಳಿಕೊಳ್ಳುವಷ್ಟು ಪ್ರತಿಕ್ರಿಯೆ ದೊರೆಯಲಿಲ್ಲ. ನಂತರ ಸ್ವತಃ ನಾನೇ ನಿರ್ದೇಶಿಸಿರುವ 'ಕರಾಸ್ತ್ರ' ಸಿನಿಮಾ ಸಿದ್ಧಪಡಿಸಲಾಗಿದ್ದು, ಎಪ್ರಿಲ್ 5ರಂದು ನಗರದ ವಿದ್ಯಾದಾನ ಶಿಕ್ಷಣ ಸಮಿತಿ ಮೈದಾನದಲ್ಲಿ ಚಿತ್ರದ ಟ್ರೈಲರ್, ಲಿರಿಕಲ್ ಸಾಂಗ್ ಹಾಗೂ ಕರಾಟೆ ಬೆಲ್ಟ್ ವಿತರಣಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು




ನಿರ್ದೇಶಕ ನಾರಾಯಣ ಪೂಜಾರ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ದ್ವಾಪರ ಯುಗದಲ್ಲಿ ನಡೆದ ಘಟನೆಯ ಬಗೆಗಿನ ಪ್ರಶ್ನಾರ್ಥಕ ವಿಷಯಗಳು ಹಾಗೂ ಪ್ರಶ್ನಾತೀತ ವಿಷಯಗಳನ್ನು ಯಾವ ರೀತಿ ಬಗೆಹರಿಸಬೇಕು ಎನ್ನುವುದನ್ನು ಚಿತ್ರದಲ್ಲಿ ತೋರಿಸಲಾಗಿದೆ. ಜೊತೆಗೆ ಸಮಾಜದಲ್ಲಿ ಮಹಿಳೆಯರು ಯಾವ ರೀತಿ ಬದುಕಬೇಕು ಮತ್ತು ಹೆಣ್ಣು ಮನಸ್ಸು ಮಾಡಿದರೆ ಏನನ್ನಾದರೂ ಸಾಧನೆ ಮಾಡಬಹುದು ಎನ್ನುವುದನ್ನು ಚಿತ್ರದಲ್ಲಿ ತೋರಿಸಲಾಗಿದೆ ಎಂದು ಹೇಳಿದರು.

ಶ್ರೀ ಶಿವಶಕ್ತಿ ಸಿನಿ ಕಂಬೈನ್ಸ್ ಮೂಲಕ ಪ್ರಥಮ ಕಾಣಿಕೆಯಾಗಿ 'ಕರಾಸ್ತ್ರ' ಕನ್ನಡ ಚಲನಚಿತ್ರ ಉತ್ತರ ಕರ್ನಾಟಕದ ಕಲಾವಿದರನ್ನು ಸೇರಿಸಿಕೊಂಡು ನಿರ್ಮಿಸಲಾಗಿದೆ. ಇದೀಗ ಈ ಚಿತ್ರದ ಟ್ರೈಲರ್ ಮತ್ತು ಲಿರಿಕಲ್ ವಿಡಿಯೋ ಸಾಂಗ್ ಬಿಡುಗಡೆ ಮಾಡುತ್ತಿದ್ದೇವೆ. ಪಾತ್ರದಲ್ಲಿ ರಿಯಲ್ ಕರಾಟೆ ಪಟುಗಳು ಮತ್ತು ನಾಲ್ವರು ರಂಗಭೂಮಿ ಕಲಾವಿದರು ಅಭಿನಯಿಸಿದ್ದಾರೆ. ಹುಬ್ಬಳ್ಳಿ, ಬ್ಯಾಡಗಿ, ಗದಗ, ಹಾವೇರಿ ಸುತ್ತಮುತ್ತ ಚಿತ್ರೀಕರಣ ನಡೆಸಲಾಗಿದ್ದು, ಕತೆ, ಚಿತ್ರಕತೆ, ಸಾಹಿತ್ಯ ಮತ್ತು ನಿರ್ಮಾಣದ ಜವಾಬ್ದಾರಿಯನ್ನು ನಾನೇ ನಿರ್ವಹಿಸಿದ್ದೇನೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಚಿತ್ರದ ನಟಿ ಮನಿಷಾ ಕಬ್ಬೂರ, ಬಸವರಾಜ ಹೊಂಬಾಳಿ, ಕರಾಟೆ ಶಿಕ್ಷಕರಾದ ಮಂಜುನಾಥ, ಡಾ. ಪ್ರಭು ಗಂಜಿಹಾಳ, ಶ್ರೀನಿವಾಸ ಹುಯಿಲಗೋಳ ಉಪಸ್ಥಿತರಿದ್ದರು.

ಶ್ರೀನಿವಾಸ ಹುಯಿಲಗೋಳ ಮಾತನಾಡಿ, ಚಲನಚಿತ್ರದ ಬಿಡುಗಡೆ ಕಾರ್ಯಕ್ರಮವನ್ನು ಜಗದ್ಗುರು ತೋಂಟದಾರ್ಯ ಮಠದ ಪೀಠಾಧಿಪತಿಗಳಾದ ಪರಮ ಪೂಜ್ಯ ಶ್ರೀ ಡಾ. ಸಿದ್ಧರಾಮ ಮಹಾಸ್ವಾಮಿಗಳು ನೆರವೇರಿಸಲಿದ್ದು, ಮುಂದಿನ ದಿನಗಳಲ್ಲಿ ಕರಾಸ್ತ್ರ ಚಿತ್ರವನ್ನು ಪ್ರೇಕ್ಷಕರು ಚಿತ್ರಮಂದಿರದಲ್ಲಿ ವೀಕ್ಷಿಸಿ ಪ್ರೋತ್ಸಾಹಿಸಬೇಕು ಎಂದರು.

# ಜಿ.ಪಂ ಸಿಇಓ ಭೇಟಿ, ಪರಿಶೀಲನೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಇಲ್ಲಿನ ಕುಂದಗೋಳ ತಾಲೂಕಿನ ಹಿರೇನರ್ತಿ ಮತ್ತು ಯರಗುಪ್ಪಿ ಗ್ರಾಮ ಪಂಚಾಯಿತಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಕ ಅಧಿಕಾರಿ ಭುವನೇಶ ಪಾಟೀಲ ಭೇಟಿ ನೀಡಿ, ಯರಗುಪ್ಪಿ–ರೊಟ್ಟಿಗವಾಡ ರಸ್ತೆಯ ಶಂಕರ ಗೌಡ ಪಾಟೀಲ ಇವರ ಜಮೀನಿಂದ ದ್ಯಾವಪ್ಪ ಹೊಸಮನಿ ಇವರ ಜಮೀನಿನವರೆಗೆ ಕಾಲುವೆ ಹೂಳೆತ್ತುವ ಕಾಮಗಾರಿ ಪರಿಶೀಲಿಸಿ, ಸ್ಥಳದಲ್ಲಿದ್ದ ಕೂಲಿ ಕಾರ್ಮಿಕರೊಂದಿಗೆ ಸಂವಾದ ನಡೆಸಿದರು.

ನಂತರ ಹಿರೇನರ್ತಿ ಗ್ರಾಮದ ರಾಮನ ಗೌಡ್ರು ಬಳಗಲಿ ಇವರ ಜಮೀನಿನ ಹತ್ತಿರ ಕಾಲುವೆ ನಿರ್ಮಾಣ ಕಾಮಗಾರಿಯನ್ನು ಪರಿವೀಕ್ಷಣೆ ಮಾಡಿ, ಕೂಲಿ ಕಾರ್ಮಿಕರೊಂದಿಗೆ ಸಂವಾದ ನಡೆಸಿದರು. ಪಂಚಾಯತ ಸಭಾಭವನದಲ್ಲಿ ಪ್ರಗತಿ ಪರಿಶೀಲನೆ ಸಭೆ ಜರುಗಿಸಿ, 2024–25ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಅತೀ ಕಡಿಮೆ ಸಾಧನೆ ಮಾಡಿರುವ ಪಂಚಾಯಿತಿಯ ಗ್ರಾಮ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ನರೇಗಾ ಯೋಜನೆಯಡಿ ಕಾರ್ಯನಿರ್ವಹಿಸುವ ಟಿಇಎ ಅವರಿಗೆ ಕಾಲಮಿತಿಯಲ್ಲಿ ಅನುಮೋದಿತ ಕ್ರಿಯಾಯೋಜನೆಯ ಅನುಸಾರ ಕಾಮಗಾರಿಗಳನ್ನು ಕೈಗೊಂಡು ಪೂರ್ಣ ಪ್ರಮಾಣದ ಗುರಿ ಸಾಧಿಸಬೇಕೆಂದು ಸೂಚಿಸಿದರು.



ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ, ಉದ್ಯೋಗ ಖಾತ್ರಿಯೋಜನೆಯ ಸಹಾಯಕ ನಿರ್ದೇಶಕರು ಹಾಗೂ ವಿವಿಧ ಗ್ರಾ.ಪಂ ಅಧ್ಯಕ್ಷರು, ಗ್ರಾಮ ಅಭಿವೃದ್ಧಿ ಅಧಿಕಾರಿ, ನರೇಗಾ ಯೋಜನೆಯಡಿ ಕಾರ್ಯನಿರ್ವಹಿಸುವ ಟಿಇಎ, ಟಿಸಿ, ಟಿಐಇಸಿ ಹಾಗೂ ಬಿಎಫ್ಟಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಭವಿಷ್ಯ ರೂಪಿಸುವ ಬೇಸಿಗೆ ಶಿಬಿರ ಆರಂಭ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಬೇಸಿಗೆಯ ರಜಾ ದಿನಗಳಲ್ಲಿ ಮಕ್ಕಳು ಟಿ.ವಿ ಮತ್ತು ಮೊಬೈಲ್ ನೋಡುತ್ತ ವಿನಾಕಾರಣ ಕಾಲ ಕಳೆಯುವುದನ್ನು ತಪ್ಪಿಸಲು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯವು ನೈತಿಕ ಶಿಕ್ಷಣದೊಂದಿಗೆ ಆಧ್ಯಾತ್ಮಿಕ ಲೋಕದ ಅದ್ಭುತ ರಹಸ್ಯವನ್ನು ತಿಳಿಸಿಕೊಡಲು ಬೇಸಿಗೆ ಶಿಬಿರವನ್ನು ಹಮ್ಮಿಕೊಂಡಿದೆ ಎಂದು ಸಂಚಾಲಕಿ ಬಿ.ಕೆ. ಸರೋಜಕ್ಕ ಹೇಳಿದರು.

ಇಲ್ಲಿಯ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಶಾಖೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆ ಮಕ್ಕಳಿಗೆ ಹಮ್ಮಿಕೊಂಡಿರುವ ಬೇಸಿಗೆ ಶಿಬಿರದಲ್ಲಿ ಅವರು ಮಾತನಾಡಿದರು.

ಇಂದು ಮಕ್ಕಳು ಅತಿಯಾಗಿ ಟಿ.ವಿ ಮತ್ತು ಮೊಬೈಲ್‌ನ ಗೀಳು ಹಚ್ಚಿಕೊಂಡು ಸಂಸ್ಕೃತಿ ಮತ್ತು ಸಂಪ್ರದಾಯದಿಂದ ವಿಮುಖರಾಗುತ್ತಿದ್ದಾರೆ. ಇದು ಶಾಲಾ ರಜಾ ದಿನಗಳಲ್ಲಿ ಅತಿಯಾಗುತ್ತಿದೆ. ಆದ್ದರಿಂದ 11 ದಿನಗಳ ಕಾಲ ನಡೆಯುವ ಬೇಸಿಗೆ ಶಿಬಿರದಲ್ಲಿ ತಮ್ಮ ಮಕ್ಕಳನ್ನು ಕಳಿಸಬೇಕು. ಶಿಬಿರದಲ್ಲಿ ಮಕ್ಕಳ ದುಷ್ಟ ವರ್ತನೆಯನ್ನು ಪರಿವರ್ತನೆ ಮಾಡಲಾಗುವುದು. ಆರೋಗ್ಯದ ಬಗ್ಗೆ ಜ್ಞಾನವನ್ನು ತುಂಬಿ ಅವರಲ್ಲಿ ಜ್ಞಾಪಕ ಶಕ್ತಿಯನ್ನು ವೃದ್ಧಿಸುವಂತೆ ಮಾಡಲಾಗವುದು. ಈ ಶಿಬಿರದಲ್ಲಿ 5ರಿಂದ 9ನೇ ತರಗತಿಯ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದ್ದು, ಈ ಶಿಬಿರ ಸಂಪೂರ್ಣ ಉಚಿತವಾಗಿರುತ್ತದೆ ಎಂದು ತಿಳಿಸಿದರು.

ಗ್ರಾ.ಪಂ ಮಾಜಿ ಉಪಾಧ್ಯಕ್ಷೆ ಪ್ರೇಮಾ ಮಟ್ಟಿ, ನಿವೃತ್ತ ಉಪನ್ಯಾಸಕ ಆರ್.ಎನ್. ಗೌಡರ ಉಪಸ್ಥಿತರಿದ್ದರು.

# ಕಟ್ಟಡ ಮಾಲೀಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ನರಗುಂದ ಪಟ್ಟಣಕ್ಕೆ ಹೊಸದಾಗಿ ಮಂಜೂರಾಗಿರುವ ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಸತಿ ನಿಲಯಕ್ಕೆ ನರಗುಂದ ಪುರಸಭೆ ವ್ಯಾಪ್ತಿಯಲ್ಲಿ ಈ ಕೆಳಕಂಡ ಸೌಲಭ್ಯಗಳನ್ನು ಹೊಂದಿರುವ ಬಾಡಿಗೆ ಕಟ್ಟಡ ಅವಶ್ಯವಿರುತ್ತದೆ.

100 ವಿದ್ಯಾರ್ಥಿಗಳ ವಸತಿ ಸಾಮರ್ಥ್ಯ ಹೊಂದಿರಬೇಕು. ಅಡುಗೆ ಹಾಗೂ ಊಟದ ಕೋಣೆ ಪ್ರತ್ಯೇಕವಾಗಿ ಇರಬೇಕು. ಕುಡಿಯುವ ನೀರಿನ ಸೌಲಭ್ಯ ಹೊಂದಿರಬೇಕು. ರಸ್ತೆ ಸಂಪರ್ಕ ಹೊಂದಿರಬೇಕು. ಮೇಲ್ಕಂಡಂತೆ ಹಾಗೂ ಇತರೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒಳಗೊಂಡಿರುವ ಬಾಡಿಗೆ ಕಟ್ಟಡ ಅವಶ್ಯವಿದ್ದು, ಸದರಿ ಕಟ್ಟಡವನ್ನು ಬಾಡಿಗೆ ನೀಡುವ ಮಾಲೀಕರು ತುರ್ತಾಗಿ ತಾಲೂಕ ವಿಸ್ತರಣಾಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಉಪವಿಭಾಗ ಅವರನ್ನು ಎಪ್ರಿಲ್ 15 ರೊಳಗಾಗಿ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ 9741921025 ಗೆ ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೊಲೀಸ್ ಸಿಬ್ಬಂದಿಗಳಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಪ್ರಾಮಾಣಿಕ ಮತ್ತು ನಿಸ್ವಾರ್ಥ ಸೇವೆ ಸಲ್ಲಿಸಿದ ಪೊಲೀಸ್ ಸಿಬ್ಬಂದಿಗಳಿಗೆ ಲಕ್ಕುಂಡಿ ಗ್ರಾಮದ ಸಾರ್ವಜನಿಕರ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಇಲ್ಲಿಯ ಗ್ರಾ.ಪಂ ಸದಸ್ಯ ರುದ್ರಪ್ಪ ಮುಸ್ಕಿನಭಾವಿ ಅವರ ನೇತೃತ್ವದಲ್ಲಿ ಗದಗ ಗ್ರಾಮೀಣ ಠಾಣೆಯ ಸಬ್‌ಇನ್ಸ್‌ಪೆಕ್ಟರ್ ಎಲ್. ಕೆ. ಜೂಲಿಕಟ್ಟಿ, ಹವಾಲ್ದಾರರಾದ ಬಸವರಾಜ ಗುಡ್ಲಾನೂರ, ಆನಂದಸಿಂಗ್ ದೊಡ್ಡಮನಿ, ಪೊಲೀಸ್ ಪೇದೆ ಪ್ರವೀಣ ಕಲ್ಲೂರ ಅವರನ್ನು ಸನ್ಮಾನಿಸಿ



ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ಬಸಪ್ಪ ರೇವಡಿ, ಹಾಲ್ಲಪ್ಪ ಮುಸ್ಕಿನಭಾವಿ, ಗವಿಶಿದ್ದಪ್ಪ ರೇವಡಿ, ಸಣ್ಣೀರಪ್ಪ ಮುಸ್ಕಿನಭಾವಿ, ವೀರಯ್ಯ ಗಂಧದ, ಮಹೇಶ ಮುಸ್ಕಿನಭಾವಿ, ಮಹಾದೇವಪ್ಪ ಕವಲೂರು, ಮಹಮ್ಮದರಫೀಕ್ ಹುಬ್ಬಳ್ಳಿ ಸೇರಿದಂತೆ ಇತರರು ಇದ್ದರು.

# ಉಚಿತ ಆರೋಗ್ಯ ತಪಾಸಣಾ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ಆರೋಗ್ಯ ದಿನಾಚರಣೆಯ ಅಂಗವಾಗಿ ಸೌಖ್ಯದಾ ಆಸ್ಪತ್ರೆ ಮತ್ತು ಎಸ್‌ಡಿಎಂ ನಾರಾಯಣ ಹಾರ್ಟ್ ಸೆಂಟರ್ ಸಂಯುಕ್ತ ಆಶ್ರಯದಲ್ಲಿ ನಗರದ ಸೌಖ್ಯದಾ ಆಸ್ಪತ್ರೆಯಲ್ಲಿ ಎ.7ರಿಂದ 9ರವರೆಗೆ ಬೆಳಿಗ್ಗೆ 10ರಿಂದ ರಾತ್ರಿ 8ರವರೆಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಫಿಸಿಷಿಯನ್ ಮತ್ತು ಮಧುಮೇಹ ತಜ್ಞರಾದ ಡಾ. ಮಹಮ್ಮದ್ ನಿಜಾಮುದ್ದೀನ್ ಅತ್ತಾರ್ ತಪಾಸಣೆ ಮಾಡುವರು.




ಶಿಬಿರದಲ್ಲಿ ವೈದ್ಯರೊಂದಿಗೆ ಉಚಿತ ಸಮಾಲೋಚನ, ದೇಹದ ತೂಕ ಪ್ರಮಾಣ, ಬ್ಲಡ್ ಪ್ರೆಶರ್, ಇಸಿಜಿ, 2ಡಿ ಎಕೋ, ಸಕ್ಕರೆ ಕಾಯಿಲೆ ಪರೀಕ್ಷೆ ಮಾಡಲಾಗುತ್ತದೆ. ಶಿಬಿರದಲ್ಲಿ ನೊಂದಾಯಿಸಿದವರಿಗೆ ಮೊದಲನೆಯ ದಿನ 2ಡಿ ಎಕೋ ಉಚಿತವಾಗಿ ಮಾಡಲಾಗುವುದು. ವೈದ್ಯರ ಸಲಹೆ ಮೇರೆಗೆ ಆಯ್ದ ಪರೀಕ್ಷೆಗಳಲ್ಲಿ ಶೇ 50ರಷ್ಟು ರಿಯಾಯಿತಿಯಲ್ಲಿ ಕೊಲೆಸ್ಟ್ರಾಲ್ ಪರೀಕ್ಷೆ, ಲಿವರ್ ಪರೀಕ್ಷೆ, ಕಿಡ್ನಿ ಪರೀಕ್ಷೆ, ರಕ್ತ ಪರೀಕ್ಷೆ, ಥೈರಾಯ್ಡ್ ಪರೀಕ್ಷೆ, ಮೂತ್ರ ಪರೀಕ್ಷೆ, ಟ್ರೋಪೋನಿನ್ ಟಿ, ಚೆಸ್ಟ್ ಎಕ್ಸರೇ ನೀಡಲಾಗುತ್ತದೆ.

ಶಿಬಿರಕ್ಕೆ ಹಳೆಯ ವರದಿ, ವೈದ್ಯರ ಪತ್ರ ಹಾಗೂ ಔಷಧಿ ಚೀಟಿಗಳು ತೆಗೆದು–ಕೊಂಡು ಬರಬೇಕು. ಹೆಚ್ಚಿನ ಮಾಹಿತಿಗಾಗಿ–917829029139, 08372295959/58 ಸಂಪರ್ಕಿಸಬೇಕು ಎಂದು ಆಸ್ಪತ್ರೆಯ ಅಧಿಕಾರಿ ಶಿವಾನಂದ ಮುಳಗುಂದ ತಿಳಿಸಿದ್ದಾರೆ.

## ಉಚಿತ ಯೋಗ ತರಬೇತಿ ಶಿಬಿರ ಇಂದಿನಿಂದ

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ-2025 ಮತ್ತು ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆ ಗದಗ ಇವರುಗಳ ಸಹಯೋಗದಲ್ಲಿ ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರೆಯ ನಿಮಿತ್ತ ಆಸಕ್ತರಿಗಾಗಿ ಎಪ್ರಿಲ್ 5ರಿಂದ ಒಂದು ವಾರದ ಕಾಲ ಪ್ರತಿದಿನ ಬೆಳಿಗ್ಗೆ 6ರಿಂದ 7 ಗಂಟೆಯವರೆಗೆ ಉಚಿತ ಯೋಗ ತರಬೇತಿ ಶಿಬಿರ ಆಯೋಜಿಸಲಾಗಿದೆ. ಶಿಬಿರವು ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ ಶಿವಾನುಭವ ಮಂಟಪ ಶ್ರೀ ಜಗದ್ಗುರು ತೋಂಟದಾರ್ಯ ಮಠದಲ್ಲಿ ಜರುಗುವುದು.

ಶಿಬಿರದಲ್ಲಿ ನಿತ್ಯ ಯೋಗಾಭ್ಯಾಸ, ಜೀವನಶೈಲಿ, ವಿವಿಧ ಕಾಯಿಲೆಗಳ ನಿಯಂತ್ರಣ, ವ್ಯಕ್ತಿತ್ವ ವಿಕಸನ ಮುಂತಾದ ವಿಷಯಗಳ ಕುರಿತು ತರಬೇತಿ ನೀಡಲಾಗುವುದು. ಶಿಬಿರದ ಪ್ರಾರಂಭೋತ್ಸವವು ಎ.5ರಂದು ಬೆಳಿಗ್ಗೆ 9 ಗಂಟೆಗೆ ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರ ದಿವ್ಯ ಸಾನಿಧ್ಯ ಮತ್ತು ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿಯ ಸರ್ವ ಪದಾಧಿಕಾರಿಗಳ ಉಪಸ್ಥಿತಿಯಲ್ಲಿ ನೆರವೇರಲಿದೆ.

ಶಿಬಿರದ ಮಾರ್ಗದರ್ಶಕರಾಗಿ ಯೋಗಾಚಾರ್ಯ ಕೆ.ಎಸ್. ಪಲ್ಲೇದ, ಶಿಬಿರ ಶಿಕ್ಷಕರಾಗಿ ಅಂಜನೇಶ ಮಾನೆ, ಶೋಭಾ ಗುಗ್ಗರಿ, ಸಂಚಾಲಕರಾಗಿ ಶೈಲಾ ಕೋಡೆಕಲ್ ಕಾರ್ಯನಿರ್ವಹಿಸುವರು. ಶಿಬಿರದಲ್ಲಿ ಭಾಗವಹಿಸಿದವರೆಲ್ಲರಿಗೂ ಪ್ರಮಾಣಪತ್ರ ಕೊಡಲಾಗುವುದು. ಹೆಚ್ಚಿನ ಸಂಖ್ಯೆಯಲ್ಲಿ ಆಸಕ್ತರು ಶಿಬಿರದಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ-2025ರ ಅಧ್ಯಕ್ಷರಾದ ಡಾ. ಧನೇಶ ದೇಸಾಯಿ, ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರ ಪರವಾಗಿ ಸಂಘಟನಾ ಕಾರ್ಯದರ್ಶಿ ನಾಗಪ್ಪ ವೀ.ಸವಡಿ ತಿಳಿಸಿದ್ದಾರೆ.

### ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ನೋಂದಾಯಿತ ವಿದ್ಯಾರ್ಥಿಗಳಲ್ಲಿ ಶೇ. 98.27ರಷ್ಟು ಹಾಜರಾತಿ

# ಮಿಷನ್ ವಿದ್ಯಾಕಾಶಿಗೆ ಮೊದಲ ಹಂತದ ಯಶಸ್ಸು

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ವಿದ್ಯಾಕಾಶಿಯೆಂದೇ ಉತ್ತರ ಕರ್ನಾಟಕ ಭಾಗದಲ್ಲಿ ಚಿರಪರಿಚಿತವಾಗಿ ರಾಷ್ಟ್ರೀಯ, ಅಂತಾರಾಷ್ಟ್ರೀಯ ಮಟ್ಟಕ್ಕೆ ಸಂಗೀತ, ಸಾಹಿತ್ಯ, ಕಲೆ, ಚಿತ್ರಕಲೆ, ರಂಗಭೂಮಿ ಕ್ಷೇತ್ರದಿಂದ ನೂರಾರು ಸಾಧಕರನ್ನು ಕಳುಹಿಸಿದ ಕೀರ್ತಿ ಗಳಿಸಿದ್ದ ಧಾರವಾಡ ಜಿಲ್ಲೆಗೆ ಇತ್ತೀಚಿನ ಕೆಲವು ವರ್ಷಗಳಿಂದ ಶೈಕ್ಷಣಿಕ ಹಿನ್ನೆಡೆ ಆಗಿತ್ತು. ಧಾರವಾಡ ಜಿಲ್ಲೆಗೆ ಶೈಕ್ಷಣಿಕವಾಗಿ ಐತಿಹಾಸಿಕ ವೈಭವವನ್ನು ಮರು ಸೃಷ್ಟಿಸಲು ಮತ್ತು ವಿದ್ಯಾಕಾಶಿ ಜೊತೆಗೆ ದಿವ್ಯಕಾಶಿ ಆಗಿಸಲು ಪಣತೊಟ್ಟ ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು, ಪ್ರಸಕ್ತ ವರ್ಷದ ಶೈಕ್ಷಣಿಕ ಆರಂಭದ ದಿನಗಳಲ್ಲಿಯೇ ಶೈಕ್ಷಣಿಕ ತಜ್ಞರೊಂದಿಗೆ, ಸಂವಹನ ತಜ್ಞರೊಂದಿಗೆ ಚರ್ಚಿಸಿ, ಮಿಷನ್ ವಿದ್ಯಾಕಾಶಿ ಯೋಜನೆಯನ್ನು ಹುಟ್ಟು ಹಾಕಿದರು. ಶಿಕ್ಷಕರೊಂದಿಗೆ, ವಿದ್ಯಾರ್ಥಿಗಳೊಂದಿಗೆ, ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರೊಂದಿಗೆ, ಎಸ್.ಡಿ.ಎಂ.ಸಿ. ಸದಸ್ಯರೊಂದಿಗೆ ಮತ್ತು ಶಿಕ್ಷಣ ಇಲಾಖೆ ಅಧಿಕಾರಿಗಳೊಂದಿಗೆ ಪ್ರತ್ಯೇಕ ಸಭೆಗಳನ್ನು ಜರುಗಿಸಿ, ಶೈಕ್ಷಣಿಕ ಸಾಧನೆಗೆ ಪ್ರೇರೇಪಿಸಿದರು. ಪ್ರತಿ ಹಂತದಲ್ಲೂ ಸ್ವತಃ ತಾವೇ ಭಾಗವಹಿಸಿ, ಎಲ್ಲರಲ್ಲೂ ಗುರಿ ಸಾಧನೆಯ ಭರವಸೆ ಮೂಡಿಸಿದರು. ಅದರಂತೆ ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ-1ರ ಎಲ್ಲ ಆರು



ವಿಷಯಗಳ ಪರೀಕ್ಷೆಗಳು ಜಿಲ್ಲೆಯಾದ್ಯಂತ ಶಾಂತವಾಗಿ, ಪಾರದರ್ಶಕವಾಗಿ ಜರುಗಿದವು. ನಕಲು, ಡಿಬಾರದಂತ ಯಾವ ಕಪ್ಪು ಚುಕ್ಕೆಗಳಿಲ್ಲದೇ ಪರೀಕ್ಷೆಗಳು ಜರುಗಿದವು. ಪರೀಕ್ಷಾ ದಿನಗಳಂದು ಎಲ್ಲ ತಾಲೂಕುಗಳಿಗೂ ಸ್ವತಃ ಜಿಲ್ಲಾಧಿಕಾರಿಗಳೇ ಸಂಚರಿಸಿ, ಭೇಟಿ ನೀಡಿದರು. ಸರ್ವ ಸಾಮಾಜಿಕ ಸಮಸ್ಯೆಗಳಿಗೂ ಉತ್ತಮ ಶಿಕ್ಷಣವೇ ಮದ್ದು ಎಂದು ನಂಬಿರುವ ಜಿಲ್ಲಾಧಿಕಾರಿಗಳು ಎಡೆಬಿಡದೆ, ನಿರಂತರ ಶಾಲಾ ಭೇಟಿ, ರೂಢಿ ಪರೀಕ್ಷೆ, ಪಾಸಿಂಗ್ ಪ್ಯಾಕೇಜ್ ಮತ್ತು ಸಾಧನಾ ಮೆಟ್ಟಿಲು ಎಂಬ ವಿಶೇಷ ಪುಸ್ತಕ ವಿತರಣೆ, ವಿದ್ಯಾರ್ಥಿಗಳೊಂದಿಗೆ ನೇರ ಸಂವಾದ ಮಾಡುವ ಮೂಲಕ ಶಿಕ್ಷಣ ಇಲಾಖೆಗೆ ಹೊಸ ಭರವಸೆ, ಚೈತನ್ಯ ಮೂಡಿಸಿದರು. ಪ್ರಸಕ್ತ ಸಾಲಿನ ಕೊನೆಯ ಎಸ್.ಎಸ್.ಎಲ್.ಸಿ ಪರೀಕ್ಷೆಯಾದ ಎ.4ರಂದು ಧಾರವಾಡ ತಾಲೂಕಿನ ಮುಗದ, ಅಳ್ನಾವರ ಪಟ್ಟಣದ ಮಿಲ್ಲತ್ ಉರ್ದು ಪ್ರೌಢಶಾಲೆ ಹಾಗೂ ಎನ್.ಇ.ಎಸ್ ಪ್ರೌಢಶಾಲೆಗಳ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ, ಪರಿಶೀಲಿಸಿದರು. ಖುಷಿಯಿಂದ ವಿದ್ಯಾರ್ಥಿಗಳನ್ನು ಅಭಿನಂದಿಸಿ, ಭವಿಷ್ಯದ ಜೀವನ ಉತ್ತಮವಾಗಲಿ ಎಂದು ಶುಭ ಹಾರೈಸಿದರು. ನಂತರ ಅವರು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿ, ಎಸ್.ಎಸ್.ಎಲ್.ಸಿ ಬೋರ್ಡ್ ಮಾರ್ಗಸೂಚಿ ಪ್ರಕಾರ ಎಲ್ಲ ಕಡೆಯೂ ಸಿಸಿಟಿವಿ ಕಣ್ಗಾವಲುಗಳಿಂದ ಪರೀಕ್ಷೆಯನ್ನು ನಡೆಸಲಾಗಿದೆ. ಜಿಲ್ಲಾ ಪಂಚಾಯತ ಸಿಇಓ ಕಚೇರಿಯಲ್ಲಿ ತಂಡಗಳನ್ನು ಮಾಡಿ, ಲೈವ ವೆಬ್‌ಕಾಸ್ಟಿಂಗ್ ಕೇಂದ್ರದಿಂದ ಪರೀಕ್ಷೆ ಸಮಯದಲ್ಲಿ ವೀಕ್ಷಣೆಯನ್ನು ಮಾಡಲಾಗಿದೆ. ಪಾರದರ್ಶಕವಾಗಿ ಪರೀಕ್ಷೆ ನಡೆಯುವಲ್ಲಿ ಜಿಲ್ಲಾಡಳಿತ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದೆ ಎಂದರು. ಈ ವರ್ಷ 28,666 ಜನ ಮಕ್ಕಳು ಎಸ್.ಎಸ್.ಎಲ್.ಸಿ ಪರೀಕ್ಷೆಗೆ ನೋಂದಣಿ ಮಾಡಿದ್ದಾರೆ. ಒಟ್ಟಾರೆಯಾಗಿ ಕಳೆದ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಗೈರು ಆದವರು ಸಂಖ್ಯೆ ತುಂಬಾ ಕಡಿಮೆ ಇದೆ. ನೊಂದಾಯಿತ ವಿದ್ಯಾರ್ಥಿಗಳ ಪೈಕಿ ಅಂದಾಜು ಶೇ 1.5ರಷ್ಟು ವಿದ್ಯಾರ್ಥಿಗಳು ನಾನಾ ಕಾರಣಗಳಿಂದ ಗೈರಾಗಿದ್ದಾರೆ. ಆದರೆ ಸರಿಸುಮಾರು ಶೇ. 98.27ರಷ್ಟು ವಿದ್ಯಾರ್ಥಿಗಳು ಹಾಜರಾಗಿ ಉತ್ತಮವಾಗಿ ಎಲ್ಲ ಪರೀಕ್ಷೆಗಳನ್ನು ಬರೆದಿದ್ದಾರೆ ಎಂದು ಹೇಳಿದರು.

> ಹತ್ತು ವರ್ಷಗಳಿಂದ ನಮ್ಮ ಜಿಲ್ಲೆ ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಕೆಳ ಸ್ಥಾನದಲ್ಲಿ ಇದೆ. ಅದಕ್ಕಾಗಿ ಟಾಪ್ 10 ಜಿಲ್ಲೆಗಳಲ್ಲಿ ಧಾರವಾಡ ಜಿಲ್ಲೆಯನ್ನು ತೆಗೆದುಕೊಂಡು ಬರಬೇಕು ಎಂದು, ಎಲ್ಲ ಶಿಕ್ಷಕರು ಚೆನ್ನಾಗಿ ಕೆಲಸ ಮಾಡಿದ್ದಾರೆ. ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು ಎಲ್ಲರೂ ಈ ಸಂದರ್ಭದಲ್ಲಿ ಸಹಕಾರ ನೀಡಿದ್ದಾರೆ. ಅವರಿಗೆ ಅಭಿನಂದನೆಯನ್ನು ಸಲ್ಲಿಸಬೇಕು. ಏಕೆಂದರೆ ನಾವು ಮಾಡಿದ ಪರೀಕ್ಷೆಯಲ್ಲಿ ಟೆಸ್ಟ್ ಪರೀಕ್ಷೆಯಿಂದ ಹಿಡಿದು ಸುಮಾರು ವಿನೂತನ ವಿಷಯಗಳನ್ನು ಮಿಷನ್ ವಿದ್ಯಾಕಾಶಿಯಲ್ಲಿ ಮಾಡಲಾಗಿದೆ.
>
> – ದಿವ್ಯ ಪ್ರಭು.
> ಜಿಲ್ಲಾಧಿಕಾರಿಗಳು, ಧಾರವಾಡ.

# ಗ್ರಾಮದ ಕೆರೆಯ ಸಂರಕ್ಷಣೆಗೆ ಒತ್ತು ನೀಡಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗ್ರಾಮೀಣ ಭಾಗದ ಜನರು ಕೆಲಸಕ್ಕಾಗಿ ಗುಳೆ ಹೋಗುವುದನ್ನು ತಪ್ಪಿಸಿ, ಸ್ಥಳೀಯವಾಗಿಯೇ ಉದ್ಯೋಗ ನೀಡಿ ಆರ್ಥಿಕವಾಗಿ ಸದೃಢಗೊಳಿಸುವ ನಿಟ್ಟಿನಲ್ಲಿ ಉದ್ಯೋಗ ಖಾತ್ರಿ (ನರೇಗಾ) ಯೋಜನೆ ಜಾರಿಗೆ ಬಂದಿದ್ದು, ಗ್ರಾಮೀಣ ಭಾಗದ ಜನರಿಗೆ ಯೋಜನೆ ವರದಾನವಾಗಿದೆ. ಪ್ರತಿ ಕಾರ್ಮಿಕರಿಗೆ ದಿನಕ್ಕೆ 370 ರೂ. ಹಣ ಪಾವತಿಸಲಾಗುತ್ತದೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಧರ್ಮರ ಕೃಷ್ಣಪ್ಪ ಹೇಳಿದರು.

ಅವರು ಸಮೀಪದ ದೊಡ್ಡೂರ ಗ್ರಾಮದ ಹಳ್ಳ ಹೂಳೆತ್ತುವ ಕಾಮಗಾರಿ ಸ್ಥಳ ಪರಿಶೀಲನೆ ಮಾಡಿ ಮಾತನಾಡಿದರು.

ಕೆರೆ ಹೂಳೆತ್ತುವುದರಿಂದ ಅಂತರ್ಜಲ ಮಟ್ಟ ಹೆಚ್ಚಾಗಲಿದೆ. ಕೊಳವೆ ಬಾವಿಗಳಲ್ಲಿ ನೀರಿನ ಏರಿಕೆ ಆಗಲಿದೆ. ಗ್ರಾಮಸ್ಥರು ತಮ್ಮ ಗ್ರಾಮದ ಕೆರೆಯ ಸಂರಕ್ಷಣೆಗೆ ಒತ್ತು ನೀಡಬೇಕು. ನರೇಗಾ ಯೋಜನೆಯು ಗ್ರಾಮೀಣ ಜನರ ಮಹತ್ವಾಕಾಂಕ್ಷೆಯ ಯೋಜನೆಯಾಗಿದೆ. ಗ್ರಾಮೀಣ ಪ್ರದೇಶದ ಪ್ರತಿಯೊಬ್ಬರಿಗೂ ನರೇಗಾ ಯೋಜನೆಯಲ್ಲಿ ಕೆಲಸ ಒದಗಿಸಿ ಸ್ವಾವಲಂಬಿಗಳಾಗಿ ಮಾಡಿ ಯಶಸ್ವಿಯಾಗಿ ಮುನ್ನಡೆಯುತ್ತಿದೆ. ಗ್ರಾಮೀಣ ಪ್ರದೇಶದ ಜನರು ಕೂಲಿ ಕೆಲಸಕ್ಕಾಗಿ ಪಟ್ಟಣಗಳಿಗೆ ಗುಳೆ ಹೋಗುವುದನ್ನು ತಪ್ಪಿಸಿ ನರೇಗಾ ಯೋಜನೆ ಅಡಿಯಲ್ಲಿ ಕೆಲಸ ಒದಗಿಸುವ ಕಾರ್ಯ ಮಾಡಲಾಗುತ್ತಿದೆ. ಇದರ ಜೊತೆಗೆ ಸಮುದಾಯ ಹಾಗೂ ವೈಯಕ್ತಿಕ ಕಾಮಗಾರಿ ಸೌಲಭ್ಯ ಪಡೆದುಕೊಳ್ಳಬೇಕು ಎಂದು ಹೇಳಿದರು.

ನರೇಗಾ ಯೋಜನೆ ಅಡಿಯಲ್ಲಿ ಬೇಸಿಗೆ ಅವಧಿಯಲ್ಲಿ 60 ದಿನಗಳ ಕಾಲ ಕೆಲಸ ಪಡೆದು ಗರಿಷ್ಠ 22,200 ರೂ ಗಳಿಕೆ ಮಾಡಬಹುದು. ಇದರಿಂದ ರೈತರು ತಮ್ಮ ಕುಟುಂಬದ ಅಗತ್ಯ ಬಳಕೆಗೆ ಅನುಕೂಲವಾಗಲಿದೆ. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಪ್ರತಿಯೊಂದು ಗ್ರಾಮದ ಜನರು ಸ್ವಂತ ಊರಲ್ಲೇ ಕೂಲಿ ಕೆಲಸ ಮಾಡಲು ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ದೊಡ್ಡೂರ ಗ್ರಾ.ಪಂ ಅಧ್ಯಕ್ಷರಾದ ಚಂದ್ರಶೇಖರ ಈಳಗೇರ, ಗ್ರಾ.ಪಂ ಸದಸ್ಯರಾದ ಮಲ್ಲೇಶ ಮಣ್ಣಮ್ಮನವರ, ಪ್ರಮುಖರಾದ ನಾನಪ್ಪ ಲಮಾಣಿ, ಗ್ರಾ.ಪಂ ಕಾರ್ಯದರ್ಶಿ ಆರ್.ಕೆ. ಗುರುವಿನ, ಬಿಎಫ್‌ಟಿ ತೀರಕಪ್ಪ ಲಮಾಣಿ, ಮಲ್ಲಿಕಾರ್ಜುನ ತಳವಾರ ಇತರರಿದ್ದರು.



## ವಿದ್ಯಾರ್ಥಿಗಳಿಗೆ ಪರೀಕ್ಷಾ ಪ್ಯಾಡ್ ವಿತರಣೆ




■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಲ್ಲಿ ಪರೀಕ್ಷೆ ಎದುರಿಸುವ ಸಾಮರ್ಥ್ಯ ಬಲವರ್ಧನೆಗಾಗಿ ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ ಸರ್ಕಾರಿ ಶಾಲೆ ನಂ. 6, 10 ಮತ್ತು ಗದಗ ಶಹರ ವಲಯದ ಶಾಲೆ ನಂ. 11ರಲ್ಲಿ ಒಟ್ಟು 160 ಪರೀಕ್ಷಾ ಪ್ಯಾಡ್‌ಗಳನ್ನು ಹಂಚಲಾಯಿತು.

ಸಂಸ್ಥೆಯ ಐಎಸ್‌ಓ ಪುಷ್ಪಾ ಭಂಡಾರಿಯವರ ವಿನೂತನ ಆಲೋಚನೆಯಂತೆ ಸಂಸ್ಥೆಯ ಎಲ್ಲ ಸದಸ್ಯರು ತಮ್ಮ ತಮ್ಮ ಮನೆಯಲ್ಲಿರುವ ರದ್ದಿ ಪೇಪರ್ ಮಾರಿ ಹಣ ಒಟ್ಟುಗೂಡಿಸಿ ಬಂದ ಹಣದಲ್ಲಿ 160 ಪರೀಕ್ಷಾ ಪ್ಯಾಡ್‌ಗಳನ್ನು ಖರೀದಿಸಿ ಹಂಚಲಾಯಿತು. ಜಿಲ್ಲಾ ಮಾಜಿ ಗವರ್ನರ್ ಪ್ರೇಮಾ ಗುಳಗೌಡರ ಈ ಯೋಜನೆಗೆ ಮಾರ್ಗದರ್ಶನ ನೀಡಿದರು. ಶಿಕ್ಷಣ ಮಾರ್ಗದರ್ಶಕರು ಹಾಗೂ ಸಂಪನ್ಮೂಲ ವ್ಯಕ್ತಿಗಳಾದ ಕವಿತಾ ದಂಡಿನ ಸಂಸ್ಥೆಯ ಕಾರ್ಯ ಚಟುವಟಿಕೆಗಳಿಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಸಂಸ್ಥೆಯ ಅಧ್ಯಕ್ಷರಾದ ನಾಗರತ್ನಾ ಮಾರನಬಸರಿಯವರು ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿದರು. ಕಾರ್ಯದರ್ಶಿಗಳಾದ ವೀಣಾ ತಿರ್ಲಾಪೂರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಸಿಎಲ್‌ಸಿಸಿ ಸುಮಾ ಪಾಟೀಲ, ಸಂಗೀತಾ ಪಟ್ಟಣಶೆಟ್ಟಿ, ಶಾಲೆಗಳ ಶಿಕ್ಷಕ ವೃಂದ ಮತ್ತು ವಿದ್ಯಾರ್ಥಿಗಳು ಇದ್ದರು.

## ಶ್ರೀ ಗವಿಸಿದ್ಧೇಶ್ವರ ನರ್ಸಿಂಗ್ ಕಾಲೇಜಿಗೆ ಉತ್ತಮ ಫಲಿತಾಂಶ



■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನಗರದ ಶ್ರೀ ಗವಿಸಿದ್ಧೇಶ್ವರ ವಿದ್ಯಾವರ್ಧಕ ಟ್ರಸ್ಟನ ಶ್ರೀ ಗವಿಸಿದ್ಧೇಶ್ವರ ನರ್ಸಿಂಗ್ ಕಾಲೇಜಿಗೆ ಶೇ.100ರಷ್ಟು ಫಲಿತಾಂಶ ಲಭಿಸಿದೆ.

ರಾಜೀವ ಗಾಂಧಿ ಯುನಿವರ್ಸಿಟಿ ಆಫ್ ಹೆಲ್ತ್ ಸೈನ್ಸೆಸ್ ಇವರು2024-25ನೇ ಸಾಲಿನ ಅಂತಿಮ ವರ್ಷದ ನರ್ಸಿಂಗ್ ವಿದ್ಯಾರ್ಥಿಗಳ ಫಲಿತಾಂಶವನ್ನು ಪ್ರಕಟಿಸಿದ್ದು, ಕಾಲೇಜಿನ ಭಾವನಾ ಪ್ರಥಮ (ಶೇ.81.5), ಪವಿತ್ರಾ ದ್ವಿತೀಯ (ಶೇ.78.2), ದೀಪಾ ತೃತೀಯ (ಶೇ.77.4) ಸ್ಥಾನದಲ್ಲಿ ತೇರ್ಗಡೆ ಹೊಂದಿದ್ದಾರೆ. ಒಟ್ಟು 37 ವಿದ್ಯಾರ್ಥಿಗಳಲ್ಲಿ 7 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 30 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಆಡಳಿತ ಮಂಡಳಿ, ಪ್ರಾಚಾರ್ಯರು ಹಾಗೂ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿದ್ದಾರೆ ಎಂದು ಕಾಲೇಜಿನ ಪ್ರಕಟಣೆ ತಿಳಿಸಿದೆ.

### ವಕ್ಫ್ ತಿದ್ದುಪಡಿ ಮಸೂದೆ ಹಿಂಪಡೆಯಲು ಅಂಜುಮನ್ ಇಸ್ಲಾಂ ಕಮಿಟಿ ಒತ್ತಾಯ

# ಜನ ವಿರೋಧಿ ಕಾನೂನನ್ನು ಹಿಂಪಡೆಯಲಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ವಕ್ಫ್ ತಿದ್ದುಪಡಿ ಮಸೂದೆ ಜಾರಿಯಿಂದ ಮುಸ್ಲಿಂ ಸಮುದಾಯಕ್ಕೆ ಮಾರಕವಾಗಲಿದೆ ಎಂದು ಅಂಜುಮನ್ ಇಸ್ಲಾಂ ಕಮಿಟಿ ಮಾಜಿ ಕಾರ್ಯದರ್ಶಿ ದಾವಲಸಾಬ ತಾಳಿಕೋಟಿ ಹೇಳಿದರು.

ನಗರದ ಅಂಜುಮನ್ ಇಸ್ಲಾಂ ಕಮಿಟಿ ನೇತೃತ್ವದಲ್ಲಿ ವಕ್ಫ್ ತಿದ್ದುಪಡಿ ಮಸೂದೆ ಹಿಂಪಡೆಯಲು ಒತ್ತಾಯಿಸಿ ಜಾಮೀಯ ಮಸೀದಿಯಿಂದ ಕಪ್ಪು ಪಟ್ಟಿ ಧರಿಸಿ, ಕಾಲ್ನಡಿಗೆ ಮೂಲಕ ಕೆ.ಕೆ. ಸರ್ಕಲ್‌ವರೆಗೆ ಮೆರವಣಿಗೆ ನಡೆಸಿ ತಹಸೀಲ್ದಾರರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು.

ದೇಶದಲ್ಲಿ ಎಲ್ಲ ಸಮುದಾಯದವರಿಗೂ ಅವರದ್ದೇ ಆದ ಹಬ್ಬ, ಆಚರಣೆ, ಪೂಜೆ, ನಮಾಜ್ ಮಾಡುವ ಧಾರ್ಮಿಕ ಹಕ್ಕನ್ನು ಸಂವಿಧಾನ ನೀಡಿದೆ. ಆದರೆ ಕೇಂದ್ರ ಸರ್ಕಾರ ಸಮಾಜದಲ್ಲಿ ಶಾಂತಿ ಭಂಗ ಮಾಡುವಂತಹ ಜನ ವಿರೋಧಿ ಕಾನೂನುಗಳನ್ನು ರೂಪಿಸಲು ಮುಂದಾಗಿರುವುದು ಖಂಡನೀಯ ಎಂದರು.

ಪ್ರಧಾನ ಮಂತ್ರಿ ದೇಶದ ಸಂಪತ್ತನ್ನು ಒಂದೊಂದಾಗಿ ಮಾರುತ್ತಿದ್ದಾರೆ. ಈಗ ಮುಸಲ್ಮಾನರ ಸಂಪತ್ತಿನ ಮೇಲೆ ಕಣ್ಣು ಹಾಕಿದ್ದಾರೆ. ವಕ್ಫ್ ತಿದ್ದುಪಡಿ ಮಸೂದೆಯಲ್ಲಿ ವಕ್ಫ್ ಆಸ್ತಿ ಮತ್ತು ದೇಶದ ಭವಿಷ್ಯಕ್ಕೆ ಅಪಾಯವನ್ನುಂಟುಮಾಡುವ ತಿದ್ದುಪಡಿಗಳಿದ್ದು, ಕೂಡಲೇ ಮಸೂದೆಯನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಕಮಿಟಿಯ ಮಾಜಿ ಚೇರಮನ್ ಎ.ಡಿ. ಕೋಲಕಾರ ಮಾತನಾಡಿ, ಧಾರ್ಮಿಕ ಸ್ವಾತಂತ್ರ್ಯ ಹಾಗೂ ಒಕ್ಕೂಟ ವ್ಯವಸ್ಥೆ ಮೇಲಿನ ದಾಳಿ ಇದಾಗಿದ್ದು, ವಕ್ಫ್ ಮಸೂದೆ ಮುಸ್ಲಿಂ ಸಮುದಾಯದ ಹಿತಾಸಕ್ತಿಗೆ ಹಾನಿ ಮಾಡುತ್ತದೆ. ಮಸೂದೆಯನ್ನು ಹಿಂಪಡೆಯಲು ರಾಷ್ಟ್ರಪತಿಗಳು ಮಧ್ಯಸ್ಥಿಕೆ ವಹಿಸಿ ಕೋಟ್ಯಾಂತರ ಅಲ್ಪಸಂಖ್ಯಾತರ ರಕ್ಷಣೆಗೆ ಮುಂದಾಗುವಂತೆ ಒತ್ತಾಯಿಸಿದರು.

ತಹಸೀಲ್ದಾರ ಕಿರಣಕುಮಾರ ಕುಲಕರ್ಣಿ ಮನವಿ ಸ್ವೀಕರಿಸಿದರು. ಪ್ರತಿಭಟನಾ ಮೆರವಣಿಗೆಯಲ್ಲಿ ಅಂಜುಮನ್ ಇಸ್ಲಾಂ ಕಮಿಟಿ ಚೇರಮನ್ ಹಸನಸಾಬ ತಟಗಾರ, ಎಸ್.ಎಂ. ಆರಗಿದ್ದಿ, ನಾಸೀರ್ ಸುರಪುರ, ಮಾಸುಮಲಿ ಮದಗಾರ, ದಾದೇಸಾಬ ಹಣಗಿ, ಉಪಾಧ್ಯಕ್ಷ ಹಾಸೀಂ ಹಿರೇಹಾಳ, ಆರೀಫ್ ಮನಿಯಾರ, ಆಸೀಫ್ ಮೋಮಿನ್, ಭಾಷು ಮುದಗಲ್ಲ, ಇಮ್ರಾನ್ ಅತ್ತಾರ, ಪತ್ತೇಸಾಬ ತಹಸೀಲ್ದಾರ, ಖಾಸಿಂಸಾಬ ಮುಚ್ಚಾಲಿ, ಮೆಹಬೂಬ್ ಮುದಗಲ್ಲ ಸೇರಿದಂತೆ ಇತರರು ಇದ್ದರು.




> ಪುರಸಭೆ ಸದಸ್ಯ ರಾಜು ಸಂಗ್ಲೀಕರ ಮಾತನಾಡಿ, ವಕ್ಫ್ ತಿದ್ದುಪಡಿ ಮಸೂದೆ ದ್ವೇಷಪೂರಿತವಾಗಿದೆ. ಅಲ್ಪಸಂಖ್ಯಾತರ ಹಕ್ಕುಗಳನ್ನು ಹತ್ತಿಕ್ಕುವ ಎಲ್ಲ ಪ್ರಯತ್ನವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಹಂತ ಹಂತವಾಗಿ ಮಾಡುತ್ತಿರುವುದು ಸ್ಪಷ್ಟವಾಗಿ ಗೋಚರಿಸುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಹರಾಜಿಗಾಗಿ ದಿವಾಣಿ ನ್ಯಾಯಾಧೀಶರ ಆದೇಶ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಮುಂಡರಗಿ ತಾಲೂಕಿನ ಡಂಬಳ ಹೋಬಳಿಯ ಪೇಠಾಲೂರು ಗ್ರಾಮದಲ್ಲಿ ಇರುವ, ಅಧಿಭೋಗದಲ್ಲಿಲ್ಲದ ಭೂಮಿಯ ಅಧಿಭೋಗದ ಹಕ್ಕನ್ನು ಮಾನ್ಯ ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ಸ. ನ್ಯಾಯಿಕ ದಂಡಾಧಿಕಾರಿಗಳು ರೋಣ ಇವರ ಕಿ.ಮಿ. ನಂ:134/2020ರ ಆದೇಶದಂತೆ ಜಮೀನನ್ನು ಮಾಲಿಕರಿಂದ ನ್ಯಾಯಾಲಯಕ್ಕೆ ಸಂದಾಯ ಮಾಡಬೇಕಾದ ಮೊತ್ತ 1,44,000 ರೂ.ಗಳನ್ನು ಭರಣ ಮಾಡಲು ಎಪ್ರಿಲ್ 8ರಂದು ಬೆಳಿಗ್ಗೆ 11 ಗಂಟೆಗೆ ಅಥವಾ ಸಮಯದ ಅನಂತರ ಬಹಿರಂಗ ಹರಾಜಿಗೆ ಇಡಲಾಗುವುದೆಂದು ನೋಟೀಸ್ ನೀಡಲಾಗಿದೆ. ಮುಂಡರಗಿ ತಹಸೀಲ್ದಾರರಿಗೆ ಅರ್ಜಿ ಸಲ್ಲಿಸಿ, ಹರಾಜಿನ ದಿನಕ್ಕೆ ಮೊದಲು ಕಚೇರಿಯ ವೇಳೆಯಲ್ಲಿ ಅಥವಾ ಹರಾಜನ್ನು ನಡೆಸುವ ಅಧಿಕಾರಿಗೆ ಅರ್ಜಿ ಸಲ್ಲಿಸಿ, ಹರಾಜಿನ ಕಾಲದಲ್ಲಿ ಸಂಬಂಧಿಸಿದ ಹಿತಾಸಕ್ತಿಗಳು ಸಹಿ ಮಾಡಿದ ಹರಾಜಿನ ಲಿಖಿತ ಅಥವಾ ಮುದ್ರಿತ ಷರತ್ತುಗಳನ್ನು ನೋಡಕೊಳ್ಳಬಹುದು ಮತ್ತು ಸವಾಲು ಮಾಡಬಯಸುವವರು ಸವಾಲು ಮಾಡುವ ಮೊದಲು ಸದರಿ ಷರತ್ತುಗಳನ್ನು ತಿಳಿದುಕೊಂಡಿರಬೇಕೆಂದು ಎಚ್ಚರಿಕೆ ಕೊಡಲಾಗಿದೆ ಎಂದು ಮುಂಡರಗಿ ತಹಸೀಲ್ದಾರರು ಪತ್ರಿಕಾ ಪ್ರಕಟಣೆಗೆ ತಿಳಿಸಿದ್ದಾರೆ.



(ನಮೂನೆ-39)
(124 (2) ನೇ ನಿಯಮ)

## ಕಸಾಯಿಖಾನೆ, ಮಾಂಸ ಮಾರಾಟ ಬಂದ್

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಕಸಾಯಿಖಾನೆಗಳಲ್ಲಿ ಪ್ರಾಣಿವಧೆ ಮಾಡುವ ಹಾಗೂ ಮಾಂಸ ಮಾರಾಟಗಾರರು ಶ್ರೀ ರಾಮನವಮಿ ಅಂಗವಾಗಿ ಎಪ್ರಿಲ್ 6 ರಂದು ಜಾನುವಾರುಗಳ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಈ ಆದೇಶ ಉಲ್ಲಂಘಿಸಿದಲ್ಲಿ ಅಂಥವರ ಲೈಸನ್ಸ್ ರದ್ದು ಮಾಡಲಾಗುವುದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆಯಿಂದ ಉದ್ಯಾನವನದಲ್ಲಿ ಉದಯರಾಗ, ಸಂಧ್ಯಾರಾಗ ಕಾರ್ಯಕ್ರಮ ಪುನರಾರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯು ಐತಿಹಾಸಿಕವಾಗಿ, ಸಾಂಸ್ಕೃತಿಕವಾಗಿ ಹಾಗೂ ಸಾಹಿತ್ಯಿಕವಾಗಿ ಶ್ರೀಮಂತವಾಗಿದೆ. ಇಂತಹ ಸಾಂಸ್ಕೃತಿಕವಾಗಿ ಶ್ರೀಮಂತವಾದ ಗದಗ-ಬೆಟಗೇರಿ ಅವಳಿ ನಗರದ ಭೀಷ್ಮಕೆರೆ ಉದ್ಯಾನವನದಲ್ಲಿ ಪ್ರತಿ ಭಾನುವಾರ ಮುಂಜಾನೆ ಉದಯರಾಗ ಹಾಗೂ ಸಾಯಂಕಾಲ ಸಂಧ್ಯಾರಾಗ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

ಈ ಹಿಂದೆ ಕಾರಣಾಂತರಗಳಿಂದ ಸ್ಥಗಿತವಾದಂತಹ ಈ ಕಾರ್ಯಕ್ರಮಗಳನ್ನು ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ.ಪಾಟೀಲ ಅವರ ಅಪೇಕ್ಷೆಯ ಮೇರೆಗೆ ಮತ್ತೆ ಪ್ರಾರಂಭಗೊಳಿಸಲಾಗುತ್ತಿದೆ.

ಪ್ರತಿ ಭಾನುವಾರ ಮುಂಜಾನೆ 6.30 ರಿಂದ 7.30ರ ವರೆಗೆ ಉದಯರಾಗ ಹಾಗೂ ಸಾಯಂಕಾಲ 5.30 ರಿಂದ 6.30ರ ವರೆಗೆ ಸಂಧ್ಯಾ ರಾಗ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಗರದ ಭೀಷ್ಮಕೆರೆ ಉದ್ಯಾನವನದಲ್ಲಿ ಇನ್ನು ಮುಂದೆ ನಿರಂತರವಾಗಿ ಆಯೋಜನೆ ಮಾಡಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂ.ಉ.ನಿ-//2025-26/30 ದಿನಾಂಕ:03.04.2025

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀ ಚಂದ್ರಕಾಂತ ತಂದೆ ಅಶೋಕ ಮೇಘರಾಜ, ಶ್ರೀ ಮಾಧುಸಾ ತಂದೆ ಅಂಬಾಸಾ ಬದಿ, ಶ್ರೀ ಇಮಾಮಸಾಬ ಮಕ್ತುಂಮಸಾಬ ಮೊರಬದ ಸಾ॥ ಗದಗ** ಈ ಕೆಳಕಂಡ ಜಮೀನನ್ನು ಭೂ ಉಪಯೋಗ ನಿಗಧಿಪಡಿಸಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ನಿಗಧಿಪಡಿಸುವದರಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾಕಾಯ್ದೆ 1961 ರ **ಕಲಂ 69(3)**ರಂತೆ ಭೂ ಉಪಯೋಗ ನಿಗದಿಪಡಿಸುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1. | ಗದಗ | 135/*/4 | 00ಎಕರೆ-39ಗುಂಟೆ ಪೈಕಿ 00ಎ-16ಗುಂಟೆ 'ಬ' (ಖರಾಬು ಹೊರತುಪಡಿಸಿ) ಉಳಿದ ಕ್ಷೇತ್ರ | ಸಾರ್ವಜನಿಕ/ ಅರೇಸಾರ್ವಜನಿಕ | ವಸತಿ |
| | | 135/*/5 | 00ಎ-23ಗುಂ | | |
| | | 135/*/6 | 00ಎಕರೆ-17ಗುಂಟೆ | | |
| | | 135/*/8 | 00ಎಕರೆ-39ಗುಂಟೆ ಪೈಕಿ 00ಎ-16ಗುಂಟೆ 'ಬ' (ಖರಾಬು ಹೊರತುಪಡಿಸಿ) ಉಳಿದ ಕ್ಷೇತ್ರ 00ಎ-23ಗುಂ | | |
| | ಒಟ್ಟು ಕ್ಷೇತ್ರ | | 02ಎಕರೆ-06ಗುಂಟೆ | | |

ವಾ.ಸಾ.ಇ/ಗದಗ/08/ದೇಶಪಾಂಡೆಪಬ್ಲಿಸಿಟಿ/2025-26

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka